# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 106 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 04–11–2023 ಶನಿವಾರ | ಪುಟ: 4 | ಬೆಲೆ : ರೂ.2–00
Volume - 01 Issue - 106 | Title- Code: KARKAN 28269 | Chitradurga | Date: 04-11-2023 Saturday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಅಸಂಘಟಿತ ವಲಯದ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ನೀಡಲು ಬದ್ಧ 2

ಸಿದ್ದರಾಮಯ್ಯ 5 ವರ್ಷ ಸಿಎಂ: ಸಚಿವ ಸಂತೋಷ ಲಾಡ್ 3

ಪಿಎಂ ಸ್ವನಿಧಿ ಯೋಜನೆ ಲಾಭ ಪಡೆಯಿರಿ: ಮಾಜಿ ಸಚಿವ ರಾಮದಾಸ್ 4



ಸುದ್ದಿ, ಜಾಹಿರಾತಿಗೆ 9686622252


**ಫಾಸ್ಟ್ ನ್ಯೂಸ್**

## ರೈತರ ನಿತ್ಯ 7 ಗಂಟೆ ತ್ರಿಫೇಸ್ ಕರೆಂಟ್ ಪೂರೈಕೆ: ಸಚಿವ ಜಾರ್ಜ್



**ಬೆಂಗಳೂರು:** ರಾಜ್ಯದ ರೈತರಿಗೆ ಸರ್ಕಾರ ಗುಡ್ ನ್ಯೂಸ್ ನೀಡಿದ್ದು, ಶೀಘ್ರವೇ ಪ್ರತಿನಿತ್ಯ 7 ಗಂಟೆ ತ್ರಿಫೇಸ್ ವಿದ್ಯುತ್ ಪೂರೈಕೆ ಮಾಡುವುದಾಗಿ ತಿಳಿಸಿದೆ. ಈ ಕುರಿತು ಇಂಧನ ಸಚಿವ ಕೆ.ಜೆ ಜಾರ್ಜ್ ಮಾತನಾಡಿದ್ದು, ಈಗ ಕೆಲವೆಡೆ ಮಳೆ ಆಗಿದ್ದು, ಬೇಡಿಕೆ ಕಡಿಮೆಯಾಗಿದೆ. ಜಲ ವಿದ್ಯುತ್, ಉಷ್ಣ, ಪವನ ಮತ್ತು ಸೌರ ವಿದ್ಯುತ್ ಉತ್ಪಾದನೆ ಹೆಚ್ಚಾಗಿದೆ. ಪಂಜಾಬ್ ಮತ್ತು ಉತ್ತರ ಪ್ರದೇಶದಿಂದ ವಿದ್ಯುತ್ ಖರೀದಿಸಲಾಗುತ್ತಿದೆ. ಆದ್ದರಿಂದ ಕೃಷಿಗೆ ಕಡಿತ ಮಾಡಿರುವ ವಿದ್ಯುತ್ ಪೂರೈಕೆಯನ್ನು ಮತ್ತೆ ನೀಡಲಾಗುವುದು. , ಶೀಘ್ರವೇ ಪ್ರತಿನಿತ್ಯ 7 ಗಂಟೆ ವಿದ್ಯುತ್ ಪೂರೈಕೆ ಮಾಡಲಾಗುತ್ತದೆ. ಮುಖ್ಯಮಂತ್ರಿ ಅಧ್ಯಕ್ಷತೆಯಲ್ಲಿ ಒಂದೆರಡು ದಿನಗಳಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಯಲಿದ್ದು, ಅಲ್ಲಿ ಈ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ. ಕೃಷಿಗೆ ನಿತ್ಯ 5 ಗಂಟೆ ತ್ರಿಫೇಸ್ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. ನಿತ್ಯ 7 ಗಂಟೆ ವಿದ್ಯುತ್ ಪೂರೈಸುವ ನಿರ್ಧಾರವನ್ನು ಶೀಘ್ರವೇ ಕೈಗೊಳ್ಳಲಾಗುತ್ತದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

## ಪಾದಚಾರಿಗೆ ಮೋಟಾರ್ ಬೈಕ್ ಡಿಕ್ಕಿ: ಚಿಕಿತ್ಸೆ ಫಲಕಾರಿಯಾಗದೆ ಸಾವು

**ಚಳ್ಳಕೆರೆ:** ನಗರದ ಎಪಿಎಂಸಿ ಮಾರುಕಟ್ಟೆ ಬಳಿ ರಸ್ತೆಬದಿ ನಡೆದುಕೊಂಡು ಹೋಗುತ್ತಿದ್ದ ಜಗದೀಶ್(65) ಎಂಬಾತನಿಗೆ ನೆಹರೂ ಸರ್ಕಲ್‌ನಿಂದ ಹಿರಿಯೂರು ಕಡೆಗೆ ಚಲಿಸುತ್ತಿದ್ದ ಬುಲ್ಲೆಟ್ ಬೈಕ್ ಡಿಕ್ಕಿ ಹೊಡೆದ ಪರಿಣಾಮವಾಗಿ ಜಗದೀಶ್ ನೆಲಕ್ಕೆ ಬಿದ್ದು ರಕ್ತಗಾಯವಾದ ಕೂಡಲೇ ಆತನನ್ನು ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಹೆಚ್ಚಿನ ಚಿಕಿತ್ಸೆಗಾಗಿ ದಾವಣಗೆರೆ ಎಸ್‌ಎಸ್ ಆಸ್ಪತ್ರೆಗೆ ದಾಖಲಿಸುವ ಸಂದರ್ಭದಲ್ಲಿ ದಾರಿಯಲ್ಲಿ ಮೃತಪಟ್ಟಿರುತ್ತಾನೆ. ಅಪಘಾತವೆಸಗಿದ ಮೋಟಾರ್ ಬೈಕ್ ಚಾಲಕ ನಾಗೇಂದ್ರರವರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ದೂರು ನೀಡಿದ್ದು ಎಎಸ್‌ಐ ಶಿವಣ್ಣ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

### ಜನರಿಗಾಗಿ ನುಡಿದಂತೆ ನಡೆದ ಶಾಸಕ ಟಿ.ರಘುಮೂರ್ತಿ

# ಚಳ್ಳಕೆರೆ ನಗರಸಭೆಗೆ ಮೇಜರ್ ಸರ್ಜರಿ

**ಐವರು ವರ್ಗಾವಣೆ, ವಾರ್ನಿಂಗ್ ಟೈಮ್ ಮುಗಿತು, ಕೆಲಸ ಮಾಡದ ಸಿಬ್ಬಂದಿಗೆ ಇನ್ಮುಂದೆ ವರ್ಗಾವಣೆ ಭಾಗ್ಯ**

» **ಚಳ್ಳಕೆರೆ**


ಚಳ್ಳಕೆರೆ ಕ್ಷೇತ್ರದಲ್ಲಿ ನಿರಂತರವಾಗಿ ಜನ ಸಂಪರ್ಕ ಸಭೆಗಳನ್ನು ಶಾಸಕ ಟಿ.ರಘುಮೂರ್ತಿ ಅವರ ನೇತೃತ್ವದಲ್ಲಿ ನಡೆಯುತ್ತಲೇ ಇವೆ.ಅಧಿಕಾರಿ ವರ್ಗದವರು ಉತ್ತಮವಾಗಿ ಕೆಲಸ ಮಾಡಿ ಜನರಿಗೆ ಅನುಕೂಲವಾಗಬೇಕು ಎಂಬ ಹಂಬಲದೊಂದಿಗೆ ಶಾಸಕರು ಅನೇಕ ಬಾರಿ ಅಧಿಕಾರಿಗಳಿಗೆ ಎಚ್ಚರಿಕೆ ನೀಡುತ್ತ ಬಂದಿದ್ದರು ಎಚ್ಚರಿಕೆ ವಹಿಸದೆ ನಿರ್ಲಕ್ಷ್ಯ ವಹಿಸಿದರು ಎಂಬ ಹಿನ್ನೆಲೆಯಲ್ಲಿ ಜನಸಂಪರ್ಕ ಸಭೆಯ ದೂರಿನ ಹಿನ್ನೆಲೆ ಕೆಲಸ ಮಾಡದಿದ್ದರೆ ಎತ್ತಂಗಡಿ ಮಾಡುತ್ತೇವೆ ಎಂದು ಮೊದಲ ಸೂಚಿಸಿದಂತೆ ಈಗ ಇದರ ಭಾಗವಾಗಿ ಚಳ್ಳಕೆರೆ ನಗರಸಭೆಯಿಂದ ಐದು ಜನರ ನೌಕರರನ್ನು ಇತರೆ ನಗರಸಭೆಗೆ ನಿಯೋಜನೆ ಮಾಡಿ ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿದ್ದು ಇದರ ಮೂಲಕ ಚಳ್ಳಕೆರೆ ಶಾಸಕರು ವಿವಿಧ ಇಲಾಖೆಯ ಉಳಿದ ಅಧಿಕಾರಿಗಳಿಗೆ ಎಚ್ಚರಿಕೆ ಗಂಟೆ ಬಾರಿಸಿದ್ದಾರೆ.

ನಗರಸಭೆಗಳಲ್ಲಿ ಚಿಕ್ಕ ಪಟ್ಟ ಕೆಲಸಕ್ಕೆ ನಗರಸಭೆಯ ಸಿಬ್ಬಂದಿ ತಿಂಗಳು ಗಟ್ಟಲೇ ಸಾತಾಯಿಸುತ್ತಾರೆ. ಸಾರ್ವಜನಿಕರ ಕೆಲಸಗಳನ್ನು ಸರಿಯಾಗಿ ನಿರ್ವಹಣೆ ಮಾಡುತ್ತಿಲ್ಲ, ಬಹಳ ದಿನಗಳ ಕಾಲ ಒಂದೇ ಕಡೆ ಕೆಲಸ ಮಾಡಿರುವ ಪಟ್ಟಿ ಮತ್ತು ಜನರಿಗೆ ಬಂದಿರುವ ದೂರುಗಳನ್ನು ಪರಿಶೀಲಿಸಿ ನಗರಸಭೆ ಪೌರಯುಕ್ತರ ಮೂಲಕ ವರದಿ ಪಡೆದ ಜಿಲ್ಲಾಧಿಕಾರಿಗಳು ಚಳ್ಳಕೆರೆ ನಗರಸಭೆಯ ಐದು ಜನ ಸಿಬ್ಬಂದಿಯನ್ನು ಒಮ್ಮೇಲೆ ವರ್ಗಾವಣೆ ಮಾಡಿದ್ದಾರೆ.ಖಾತೆ ಮಾಡಿ ಇ–ಸ್ವತ್ತು ಮಾಡಿ ಕೊಡಲು ಸಾವಿರಾರು ಲಂಚಕ್ಕೆ ಡಿಮ್ಯಾಂಡ್ ಮಾಡುತಾರೆ ಎಂಬ ದೂರುಗಳ ಕೇಳಿ ಬಂದಿದ್ದವು.ಈ ಹಿನ್ನೆಲೆಯಲ್ಲಿ ಶಾಸಕರು ಸಾಮೂಹಿಕವಾಗಿ ವರ್ಗಾವಣೆ ಎಚ್ಚರಿಕೆ ನೀಡಿದ್ದರು. ಇತ್ತ ಸಾರ್ವಜನಿಕರು ದೂರು ನೀಡಿದ್ದರಿಂದ ಜಿಲ್ಲಾಧಿಕಾರಿ ಅವರು ಒಂದೇ ಬಾರಿ ಐದು ಜನರನ್ನು ವರ್ಗಾವಣೆ ಮಾಡಿ ಶಾಕ್ ನೀಡಿದ್ದಾರೆ. ಎಲ್ಲಾ ಇಲಾಖೆಗಳಿಗೆ ಶಾಸಕ ಟಿ.ರಘುಮೂರ್ತಿ ಅವರು ಎರಡ್ಮೂರು ತಿಂಗಳಿನಿಂದ ಜನರ ಕೆಲಸ ಮಾಡಿ ಎಂದು ಎಲ್ಲಾ ಜನ ಸಂಪರ್ಕ ಸಭೆಯಲ್ಲಿ ತಿಳಿಸುತ್ತ ಬಂದಿದ್ದರು ಆದರೆ ಕೇಲವು ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಅದರ ಮಹತ್ವ ಅರಿತು ಕೆಲಸ ಕಾರ್ಯ ಮುಗಿಸಿದರು ಆದರೆ ಕೇಲವರು ನಿರ್ಲಕ್ಷ್ಯ ವಹಸಿದ ಹಿನ್ನಲೆಯಲ್ಲಿ ಕಳೆದ ತಿಂಗಳಲ್ಲಿ ಹೆಚ್ಚ ಅವಧಿ ಇರುವ ನಗರಸಭೆಯ ಸಿಬ್ಬಂದಿ ಪಟ್ಟಿ ಮಾಡಿಸಿ ಜಿಲ್ಲಾಧಿಕಾರಿಗೆ ಕಳಸಿ ಈಗ ವರ್ಗಾವಣೆ ಮಾಡಿದ್ದಾರೆ. ಆದರೆ ಅಧಿಕಾರಿಗಳು ಏಕೆ ನಿರ್ಲಕ್ಷ್ಯ ವಹಿಸುತ್ತಾರೆ. ಜನಸೇವೆ ಮಾಡಲು ಏನ್ ಪ್ರಾಬ್ಲಂ ಅಂತ ಯಾರು ಹೇಳುತ್ತಿಲ್ಲ. ಆದರೆ ಜನರು ಅನೇಕ ಇಲಾಖೆಗಳಿಗೆ ಅಲೆದಾಡಿದರು ಸಹ ಅಧಿಕಾರಿಗಳು ಕಚೇರಿಯಲ್ಲಿ ಸಮಯಕ್ಕೆ ಸರಿಯಾಗಿ ಬರುವುದಿಲ್ಲ ಎಂಬ ದೂರುಗಳು ಸಹ ಸಾರ್ವಜನಿಕರಿಂದ ಕೇಳಿ ಬರುತ್ತಿದೆ. ಈ ಎಲ್ಲಾವನ್ನು ಅರಿತಿರುವ ಶಾಸಕರು ಆಡಳಿತ ಯಂತ್ರಕ್ಕೆ ಮೇಜರ್ ಸರ್ಜರಿ ಮುಂದಾಗಿದ್ದು ಇದರ ಭಾಗವಾಗಿ ಚಳ್ಳಕೆರೆ ನಗರಸಭೆ ಮೆಘಾ ವರ್ಗಾವಣೆಗೆ ಸಾಕ್ಷಿಯಾಗಿದ್ದು ನಾವು ಲೋಕಲ್ ಎಂದು ಭ್ರಮೆಯಲ್ಲಿದ್ದ ಸಿಬ್ಬಂದಿಗಳಿಗೆ ವರ್ಗಾವಣೆ ಆದೇಶ ನಿದ್ದೆಯಿಂದ ಎಬ್ಬಿಸಿ ಕುರಿಸಿದಂತೆ ಆಗಿದ್ದು ಉಳಿದ ತಾಲೂಕು ಮಟ್ಟದ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಕೆಲಸ ಮಾಡಿದರೆ ಮಾತ್ರೆ ಚಳ್ಳಕೆರೆಯಲ್ಲಿ ಜಾಗ ಎಂಬ ಸಂದೇಶ ಎಲ್ಲಾರಿಗೂ ರವಾನೆಯಾಗಿದೆ.




### ನಗರಸಭೆ ಕಾರ್ಯಾಲಯದಲ್ಲಿ ಸಭೆ

ಕಳೆದ ತಿಂಗಳು ಶಾಸಕ ಟಿ.ರಘುಮೂರ್ತಿ ಅವರ ಅಧ್ಯಕ್ಷತೆಯಲ್ಲಿ ನಗರಸಭೆಯಲ್ಲಿ ನಡೆದ ಜನ ಸಂಪರ್ಕ ಸಭೆಯಲ್ಲಿ ಸಾರ್ವಜನಿಕರು ಇ–ಸ್ವತ್ತು ಮತ್ತು ಖಾತೆ ಸಿಬ್ದಂಬ ತೆ ನಗರಸಭೆಯಲ್ಲಿ ಯಾವುದೇ ಕೆಲಸ ಕಾರ್ಯಗಳನ್ನು ಮಾಡಿ ಕೊಡುತ್ತಿಲ್ಲ ಎಂಬ ದೂರುಗಳು ಕೇಳಿ ಬಂದಿದ್ದವು. ಶಾಸಕರು ಸಹ ಸಿಬ್ಬಂದಿಗಳಿಗೆ ಎಚ್ಚರಿಕೆ ಸಹ ನೀಡಿದ್ದರು ಹೆಚ್ಚ ಅವಧಿ ಇರುವ ಪಟ್ಟಿ ಸಿದ್ದ ಮಾಡಲು ಸೂಚಿಸಿದ್ದರು.



### ವರ್ಗಾವಣೆಗೊಂಡ ಚಳ್ಳಕೆರೆ ಸಿಬ್ಬಂದಿಗಳು

ನಗರಸಭೆಯ ಹಿರಿಯ ಆರೋಗ್ಯ ನಿರೀಕ್ಷ ಎಚ್.ಟಿ.ಮಹಾಲಿಂಗಪ್ಪರನ್ನು ಹಿರಿಯೂರಿಗೆ, ಪ್ರಥಮ ದರ್ಜೆ ಸಹಾಯಕ ಓಬಳೇಶ್ ಮತ್ತು ಕರ ವಸೂಲಿಗಾರ ಓ.ಮಂಜುನಾಥರನ್ನು ಮೊಳಕಾಲ್ಮುರಿಗೆ, ದ್ವಿತೀಯ ದರ್ಜೆ ಸಹಾಯಕ ತಿಪ್ಪೇಸ್ವಾಮಿ ಮತ್ತು ಕರವಸೂಲಿಗಾರ ಸಿಬ್ಬಂದಿ ಕಣುಮಕ್ಕ ಎಂಬ ಇಬ್ಬರು ಸಿಬ್ಬಂದಿಯನ್ನು ಚಿತ್ರದುರ್ಗಕ್ಕೆ ವರ್ಗಾವಣೆ ಮಾಡಲಾಗಿದೆ. ಹಲವು ವರ್ಷಗಳಿಂದ ಒಂದೇ ಕಡೆ ಕೆಲಸ ನಿರ್ವಹಿದ ಅಧಿಕಾರಿಗಳಿಗೆ ಗೇಟ್ ಪಾಸ್ ನೀಡಿದ್ದಾರೆ.

### ನಿಯೋಜನೆಗೊಂಡ ನೌಕರರು

ವರ್ಗಾವಣೆಗೊಂಡವರು ಸ್ಥಳಕ್ಕೆ ಹಿರಿಯೂರು ನಗರಸಭೆಯಿಂದ ಹಿರಿಯ ಆರೋಗ್ಯ ನಿರೀಕ್ಷ ಎಚ್.ಟಿ. ಸುನೀಲ್ ಕುಮಾರ್ ಮೊಳಕಾಲ್ಮುರು ಪಟ್ಟಣ ಪಂಚಾಯಿತಿಯಿಂದ ಪ್ರಥಮ ದರ್ಜೆ ಸಹಾಯಕ ಕಿಶನ್, ಚಿತ್ರದುರ್ಗ ನಗರಸಭೆಯಿಂದ ದ್ವಿತೀಯ ದರ್ಜೆ ಸಹಾಯಕ ಟಿ.ವೆಂಕಟೇಶ್ ಮತ್ತು ಕರವಸೂಲಿಗಾರ ಮಣಿಕಂಠ, ಹೊಸದುರ್ಗ ಪುರಸಭೆಯಿಂದ ಕರವಸೂಲಿಗಾರ ವಿನಯ್ ಬಂದಿದ್ದಾರೆ.

### ಜಿಲ್ಲಾಧಿಕಾರಿಗಳಿಂದ ವರ್ಗಾವಣೆ ಆದೇಶ

ಚಳ್ಳಕೆರೆ ನಗರಸಭೆಯಲ್ಲಿ ಅ.9ರಂದು ಶಾಸಕರ ಅಧ್ಯಕ್ಷತೆಯಲ್ಲಿ ನಡೆದ ಜನ ಸಂಪರ್ಕ ಸಭೆಯಲ್ಲಿ ಕೆಲವು ಸಿಬ್ಬಂದಿಗಳ ಕರ್ವತ್ಯ ನಿರ್ವಹಣೆ ಕುರಿತು ಸಾರ್ವಜನಿಕರಿಂದ ದೂರುಗಳು ಬಂದಿದ್ದವು. ದೀರ್ಘಕಾಲದಿಂದ ಒಂದೇ ಕಚೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದರು. ಇದರಿಂದ ಸಾರ್ವಜನಿಕರ ಮತ್ತು ಆಡಳಿತಾತ್ಮಕ ಹಿತದೃಷ್ಟಿಯಿಂದ ವರ್ಗಾವಣೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಅ.31ರಂದು ಹೊರಡಿಸಿರುವ ತಮ್ಮ ಆದೇಶದಲ್ಲಿ ತಿಳಿಸಿದ್ದಾರೆ.



ಚಳ್ಳಕೆರೆಯಲ್ಲಿ ಆಡಳಿತ ಹಿತ ದೃಷ್ಟಿಯಿಂದ ಸಾರ್ವಜನಿಕರ ಅನುಕೂಲ ವಾಗಬೇಕು ಎಂಬ ಹಿನ್ನೆಲೆ ವರ್ಗಾವಣೆ ಮಾಡಲಾಗಿದೆ. ಅಧಿಕಾರಿಗಳು ಒಂದೇ ಸ್ಥಳದಲ್ಲಿ ಹಲವು ವರ್ಷಗಳಿಂದ ಸೇವೆಯಲ್ಲಿದ್ದರು ಮತ್ತು ಜನಸಂಪರ್ಕ ಸಭೆಯಲ್ಲಿ ದೂರುಗಳು ಬಂದ ಹಿನ್ನೆಲೆ ಪೌರಯುಕ್ತರ ಮೂಲಕ ಮಾಹಿತಿ ಪಡೆದು ವರ್ಗಾವಣೆ ಮಾಡಿದ್ದು ಚಳ್ಳಕೆರೆಯಿಂದ ಬಂದ ಸಿಬ್ಬಂದಿ ಪಟ್ಟಿಯಲ್ಲಿ ಮೊದಲ ಹಂತದಲ್ಲಿ ಐದು ಸಿಬ್ಬಂದಿಯನ್ನು ಬೇರೆಡೆಗೆ ನಿಯೋಜನೆ ಮಾಡಲಾಗಿದೆ. ಉಳಿದಿದ್ದು ಮುಂದಿನ ದಿನದಲ್ಲಿ ಮತ್ತೊಂದು ವರದಿ ಪಡೆದು ಮಾಡಲಾಗುತ್ತದೆ.

» **ದಿವ್ಯ ಪ್ರಭು ಜಿ.ಆರ್.ಜೆ.**
**ಜಿಲ್ಲಾಧಿಕಾರಿಗಳು**
**ಚಿತ್ರದುರ್ಗ ಜಿಲ್ಲೆ**



ಜನ ಸಂಪರ್ಕ ಸಭೆಯಲ್ಲಿ ನನ್ನ ಸಮ್ಮುಖದಲ್ಲಿ ಜನರಿಂದ ದೂರುಗಳು ಬಂದ ಹಿನ್ನೆಲೆ ನಗರಸಭೆ ಸಿಬ್ಬಂದಿಗಳನ್ನು ಜಿಲ್ಲಾಧಿಕಾರಿಗಳು ವರ್ಗಾವಣೆ ಮಾಡಿದ್ದಾರೆ.ಇದು ನಗರಸಭೆ ಸಿಬ್ಬಂದಿಗೆ ಮಾತ್ರವಲ್ಲ ಎಲ್ಲಾ ಇಲಾಖೆ ಸಿಬ್ಬಂದಿಗಳಿಗೆ ಅನ್ವಯವಾಗಲಿದೆ. ನನಗೆ ಜನರನ್ನು ಅಲೆದಾಡುವುದನ್ನು ತಪ್ಪಿಸಬೇಕು. ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ಸಬೂಬು ಹೇಳಿ ಸಮಯ ವ್ಯರ್ಥ ಮಾಡಿದರೆ ಸಹಿಸುವುದಿಲ್ಲ. ಕೆಲಸ ಮಾಡಲು ಆಗದಿದ್ದರೆ ಜಾಗ ಖಾಲಿ ಮಾಡಿ ಎಂದು ನಾನೇ ಓಪನ್ ಆಗಿ ತಿಳಿಸಿದ್ದು ಜನಸೇವೆ ಮಾಡಲು ಇಷ್ಟವಿಲ್ಲದವರು ಜಾಗ ಖಾಲಿ ಮಾಡಲಿ.

» **ಟಿ.ರಘುಮೂರ್ತಿ ಶಾಸಕರು**
**ಚಳ್ಳಕೆರೆ ವಿಧಾನಸಭಾ ಕ್ಷೇತ್ರ**

# ಎಸ್.ಕೆ.ಬಸವರಾಜನ್ ದಂಪತಿಯ ಮೇಲಿನ ಕೇಸ್ ರದ್ದು: ಹೈಕೋರ್ಟ್

» **ಬೆಂಗಳೂರು**

ಮುರುಘಾ ಶ್ರೀ ವಿರುದ್ಧ ಷಡ್ಯಂತ್ರ ನಡೆಸಿದ ಆರೋಪದ ಮೇಲೆ ಎಸ್.ಕೆ ಬಸವರಾಜನ್ ದಂಪತಿ ಮೇಲೆ ದಾಖಲಾಗಿದ್ದ ಪ್ರಕರಣವನ್ನು ಹೈಕೋರ್ಟ್ ರದ್ದುಪಡಿಸಿದೆ. ಚಿತ್ರದುರ್ಗದ ಮುರುಘಾಮಠದ ಮಾಜಿ ಆಡಳಿತಾಧಿಕಾರಿ ಎಸ್.ಕೆ ಬಸವರಾಜನ್ ಮೊಬೈಲ್‌ನಲ್ಲಿನ ಸಂಭಾಷಣೆ ಆಧರಿಸಿ ಎಫ್‌ಐಆರ್ ದಾಖಲಿಸಲಾಗಿತ್ತು. ಬಳಿಕ ಈ ಪ್ರಕರಣ ರದ್ದು ಕೋರಿ ಎಸ್.ಕೆ.ಬಸವರಾಜನ್ ಹಾಗೂ ಸೌಭಾಗ್ಯ ದಂಪತಿ ಮನವಿ ಸಲ್ಲಿಸಿದ್ದರು. ಇದೀಗ ಹೈಕೋರ್ಟ್ ಅವರ ಅರ್ಜಿ ಪುರಸ್ಕರಿಸಿ ಪ್ರಕರಣವನ್ನು ರದ್ದುಪಡಿಸಿದೆ.

**ಘಟನೆ ವಿವರ:** ಎಸ್.ಕೆ.ಬಸವರಾಜನ್ ಮುರುಘಾ ಶ್ರೀಗಳ ವಿರುದ್ಧ ಪಿತೂರಿ ನಡೆಸಿರುವುದು ಬಹಿರಂಗಗೊಂಡಿತ್ತು. ಶ್ರೀಗಳ ವಿರುದ್ಧ ಸುಳ್ಳು ಕೇಸ್ ದಾಖಲಿಸಲು ಸಂತ್ರಸ್ತೆಗೆ ಮಠದ ಶಾಲಾ ಶಿಕ್ಷಕನಾಗಿದ್ದ ಬಸವರಾಜೇಂದ್ರ ಪ್ರಚೋದನೆ ನೀಡಿದ್ದ ಆಡಿಯೋ ವೈರಲ್ ಆಗಿತ್ತು. ಈ



ಸಂಬಂಧ ನ.9ರಂದು ಮುರುಘಾಮಠದ ಉಸ್ತುವಾರಿ ಬಸವಪ್ರಭುಶ್ರೀ ಅವರು ಚಿತ್ರದುರ್ಗ ಗ್ರಾಮಾಂತರ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಪ್ರಕರಣ ದಾಖಲಿಸಿಕೊಂಡ ಪೊಲೀಸರು, ನವೆಂಬರ್ 10ರಂದು ಬಸವರಾಜೇಂದ್ರ ಬಂಧಿಸಿ ಪೊಲೀಸರ ವಿಚಾರಣೆ ಆರಂಭಿಸಿದ್ದರು. ಮುರುಘಾ ಶ್ರೀ ವಿರುದ್ಧ ಪಿತೂರಿ ನಡೆಸಿದ ಪ್ರಕರಣ ಸಂಬಂಧ ಮಾಜಿ ಶಾಸಕರೂ ಆಗಿದ್ದ ಮಠದ ಮಾಜಿ ಆಡಳಿತಾಧಿಕಾರಿ ಎಸ್.ಕೆ.ಬಸವರಾಜನ್ ಹಾಗೂ ಅವರ ಪತ್ನಿ ಸೌಭಾಗ್ಯ ಬಸವರಾಜನ್ ಅವರನ್ನು ಪೊಲೀಸರು 2022 ಡಿಸೆಂಬರ್ 16 ರಂದು ದಾವಣಗೆರೆಯಲ್ಲಿ ಅಧಿಕೃತವಾಗಿ ಬಂಧಿಸಿ ಮಹಿಳಾ ಸಾಂತ್ವನ ಕೇಂದ್ರಕ್ಕೆ ಬಿಟ್ಟಿದ್ದರು.

**ಆಡಿಯೋದಲ್ಲಿ ಮುಖ್ಯವಾಗಿ ಇರುವುದು ಏನು?:** ಮುರುಘಾ ಶರಣರ ವಿರುದ್ಧ ಸುಳ್ಳು ದೂರು ನೀಡುವಂತೆ ವ್ಯಕ್ತಿಯೊಬ್ಬರು ಸಂತ್ರಸ್ತೆಗೆ ಕರೆ ಮಾಡಿರುವ ಆಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿತ್ತು. ಈ ಸಂಭಾಷಣೆ 14 ನಿಮಿಷ 15 ಸೆಕೆಂಡ್ ಕಾಲ ಇದ್ದು, ಕರೆ ಮಾಡಿದ ವ್ಯಕ್ತಿ ಬಾಲಕಿಗೆ ಸುಳ್ಳು ದೂರು ನೀಡುವಂತೆ ಪ್ರಚೋದನೆ ಮಾಡಿದ್ದಲ್ಲದೆ, ಸಹಾಯ ಮಾಡುವುದಾಗಿ ಆಮಿಷವನ್ನೂ ಒಡ್ಡಿದ್ದನು.

# ಗಣಪತಿ ಆರಾಧನೆ ಮೌಢ್ಯದ ಸಂಕೇತ, ವಿಘ್ನೇಶ್ವರನನ್ನು ಪೂಜಿಸುವುದು ನಮ್ಮ ಸಂಸ್ಕೃತಿ ಅಲ್ಲ: ಸಾಣೇಹಳ್ಳಿ ಶ್ರೀ

» **ಚಿತ್ರದುರ್ಗ**

ವಿಘ್ನೇಶ್ವರನನ್ನು ಪ್ರಾರ್ಥಿಸುವುದು ಮತ್ತು ಪೂಜಿಸುವುದು ನಮ್ಮ ಸಂಸ್ಕೃತಿ ಅಲ್ಲ ಎಂದು ಹೊಸದುರ್ಗ ಸಾಣೇಹಳ್ಳಿ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಹೇಳಿದ್ದಾರೆ.

ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ತಾಲೂಕಿನ ಸಾಣೇಹಳ್ಳಿಯಲ್ಲಿ ಆರಂಭಗೊಂಡಿರುವ ರಾಷ್ಟ್ರೀಯ ನಾಟಕೋತ್ಸವ ಕಾರ್ಯಕ್ರಮದ ಉದ್ಘಾಟನೆ ಸಮಾರಂಭ ಕುರಿತು ಮಾತನಾಡಿದರು.

ಮನೆಗಳಲ್ಲಿ ಅಥವಾ ವೇದಿಕೆ ಕಾರ್ಯಕ್ರಮಗಳಲ್ಲಿ ಗಣಪತಿಯನ್ನು ಪೂಜಿಸುವುದು ನಮ್ಮ ಸಂಸ್ಕೃತಿಯಲ್ಲ. ಇದರ ಬದಲಿಗೆ ವಾಸ್ತವದ ತುಕ್ಕಾದ ವಚನಗಳನ್ನು ಪಠಿಸಬೇಕು. ಗಣಪತಿ ಆರಾಧನೆ ಮಾಡುವುದು ಮೌಢ್ಯದ ಸಂಕೇತ, ಇದರ ಬದಲಿಗೆ ವಚನಗಳನ್ನು ಪ್ರಸ್ತುತ ಪಡಿಸುವುದು ನಿಜವಾದ ಪ್ರಾರ್ಥನೆ ಎಂದು ಹೇಳಿದರು.

ನಮ್ಮನ್ನು ನಾವು ನಂಬಿಕೊಂಡು ಶರಣರ ಆಶಯಗಳಂತೆ ಜೀವನ ಸಾಗಿಸಿಕೊಂಡು ಹೋಗಬೇಕು. ಶರಣರ ಪ್ರಕಾರ ಸ್ವಾಸಾಮರ್ಥ, ಉತ್ತಮ ನಡತೆಯನ್ನು ಹೊಂದಿದವರು



ನಿಜವಾದ ದೇವರು ಈ ನೆಲೆಗಟ್ಟಿನಲ್ಲಿ ಆತ್ಮಾವಲೋಕನ ಅಗತ್ಯವಿದೆ ಎಂದು ತಿಳಿಸಿದರು.

ಗಣೇಶ ಕಾಲ್ಪನಿಕ ದೇವರಷ್ಟೇ, ಸ್ವಾತಂತ್ರ್ಯ ಚಳುವಳಿಯ ಸಂದರ್ಭದಲ್ಲಿ ನೆಪಮಾತ್ರಕ್ಕೆ ಹುಟ್ಟಿಕೊಂಡಿತು. ಬಾಹ್ಯ ವಸ್ತುಗಳಿಂದ ತಯಾರಿಸಿದ ದೇವರುಗಳು ದೇವರಲ್ಲ. ಕಾರ್ಯಕ್ರಮಗಳ ಆರಂಭದಲ್ಲಿ ಗಣೇಶ ಪೂಜೆ, ಶ್ಲೋಕ ಹಾಗೂ ಸ್ತೋತ್ರ ಪಠಿಸುವುದು ಹಲವರು ಜನರ ನಂಬಿಕೆಯಾಗಿದೆ. ಇದರ ಬದಲಿಗೆ ವಚನಗಳನ್ನೇ ಪ್ರಾರ್ಥನೆಯಂತೆ ಪಠಿಸುವುದು ಸೂಕ್ತ ಎಂದರು.

**ರಾಷ್ಟ್ರೀಯ ನಾಟಕೋತ್ಸವದ ವಿವರ ಇಲ್ಲಿದೆ:** ನವೆಂಬರ್ 2ರಿಂದ ಸಾಣೇಹಳ್ಳಿಯಲ್ಲಿ ಆರಂಭಗೊಂಡಿರುವ ರಾಷ್ಟ್ರೀಯ ನಾಟಕೋತ್ಸವ ನವೆಂಬರ್ 8ರಂದು ಮುಕ್ತಾಯವಾಗಲಿದೆ. ನವೆಂಬರ್ 4ರಂದು "ಕಾಯಕ ಮತ್ತು ದಾಸೋಹ ತತ್ವಗಳ ಅಂತರ್ ಸಂಬಂಧ" ವಿಚಾರ ಸಂಕಿರಣ ನಡೆಯಲಿದೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರೊ ಎಸ್.ಜಿ. ಸಿದ್ದರಾಮಯ್ಯ ವಹಿಸಲಿದ್ದಾರೆ.

ಸಂಜೆ 6: ಗಂಟೆಗೆ "ಜಲವಿವಾದ" ಉಪನ್ಯಾಸ ಕಾರ್ಯಕ್ರಮ ನಡೆಯಲಿದೆ. ಈ ಕಾರ್ಯಕ್ರಮದ ಸಾನಿಧ್ಯವನ್ನು ಜಗದ್ಗುರು ನಿರ್ಮಲಾನಂದ ಮಹಾಸ್ವಾಮಿಗಳು ಸಾನಿಧ್ಯ ವಹಿಸುವರು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹಾಗೂ ರಾಜ್ಯ ಸಚಿವ ಹೆಚ್ .ಕೆ. ಪಾಟೀಲ್ ಭಾಗವಹಿಸಲಿದ್ದಾರೆ.

ನವೆಂಬರ್ 5ರಂದು ಸಾಹಿತ್ಯ ಮತ್ತು ಸಂಸ್ಕೃತಿ ಸಮಕಾಲಿನ ಸವಾಲುಗಳು ವಿಶೇಷ ಉಪನ್ಯಾಸ ನಡೆಯಲಿದೆ. ಡಾ. ಸಿ. ನಟರಾಜ ಹುಳಿಯಾರ್ ಕಾರ್ಯಕ್ರಮ ಕುರಿತು ಉಪನ್ಯಾಸ ನೀಡಲಿದ್ದಾರೆ.


ಪುಟ ↘ 2

ನಮ್ಮ ಜನ
NAMMA JANA



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5500 |
| 85 ಕೆಡಿಎಂ (ಗ್ರಾಂ) | 5100 |

04-11-2023 ಶನಿವಾರ
04-11-2023 Saturday

| ಬೆಳ್ಳಿ ಬೆಲೆ | |
|---|---|
| ಕೆಜಿ | 63500 |



## ಫಾಸ್ಟ್ ನ್ಯೂಸ್

### ವಿಘ್ನೇಶ್ವರ ಪೂಜಿಸುವುದು ನಮ್ಮ ಸಂಸ್ಕೃತಿ ಅಲ್ಲ: ಸಾಣೇಹಳ್ಳಿ ಶ್ರೀ

» ಮೊದಲ ಪುಟದಿಂದ

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಬಿಎಸ್. ಯಡಿಯೂರಪ್ಪ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ಭಾಗವಹಿಸಲಿದ್ದಾರೆ. 'ವೆಂಬರ್ 6ರಂದು ಸಂಜೆ ಕೃಷಿಕರ ನೋವು –ನಲಿವು –ರಕ್ಷಣೆ ಉಪನ್ಯಾಸ ಕಾರ್ಯಕ್ರಮ ನಡೆಯಲಿದೆ. ಕಾರ್ಯಕ್ರಮದಲ್ಲಿ ಸಚಿವ ಸತೀಶ್ ಜಾರಕಿಹೊಳಿ, ಬಿವೈ ವಿಜಯೇಂದ್ರ ಸೇರಿದಂತೆ ಮತ್ತಿತರರು ಭಾಗವಹಿಸಲಿದ್ದಾರೆ. ನವೆಂಬರ್ 7ರಂದು ಕಲಾವಿದರ ಸ್ಥಿತಿ ಗತಿ ಕಾರ್ಯಕ್ರಮ ನಡೆಯಲಿದೆ. ನವೆಂಬರ್ 8ರಂದು ಶಿವಕುಮಾರ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಸಮಾರೋಪ ಸಮಾರಂಭ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವ ಎಂಬಿ ಪಾಟೀಲ್ ಸೇರಿದಂತೆ ಮತ್ತಿತರರು ಭಾಗವಹಿಸಲಿದ್ದಾರೆ.

### 2 ಖಾಸಗಿ ಬಸ್ ಪರಸ್ಪರ ಡಿಕ್ಕಿ: ಕೆಲವರಿಗೆ ಗಾಯ.



» ಚಳ್ಳಕೆರೆ

ತಾಲ್ಲೂಕಿನ ಯಲಗಟ್ಟೆ ಗೊಲ್ಲರಹಟ್ಟಿಯ ಅಡವಿಚಿಕ್ಕೇನಹಳ್ಳಿ ಗ್ರಾಮದ ಬಳಿ ಮಧ್ಯಾಹ್ನ ಎರಡು ಖಾಸಗಿ ಬಸ್‌ಗಳು ಎದುರಿನಿಂದ ಪರಸ್ಪರ ಡಿಕ್ಕಿ ಹೊಡೆದ ಪರಿಣಾಮ ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ಕೆಲವು ಪ್ರಯಾಣಿಕರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಹಿರಿಯೂರಿನಿಂದ ನಾರಾಯಣಪುರ ಯಲಗಟ್ಟೆ ಮೂಲಕ ಚಳ್ಳಕೆರೆಗೆ ಬರುತ್ತಿದ್ದ ಖಾಸಗಿ ಬಸ್ ಚಳ್ಳಕೆರೆಯಿಂದ ಅದೇ ಮಾರ್ಗವಾಗಿ ಹಿರಿಯೂರಿಗೆ ತೆರಳುತ್ತಿದ್ದ ಖಾಸಗಿ ಬಸ್‌ಗೆ ಡಿಕ್ಕಿ ಹೊಡೆದಿದೆ. ಸದರಿ ಅಪಘಾತದಲ್ಲಿ ಕೆಲವರಿಗೆ ಮಾತ್ರ ಅಲ್ಪಪ್ರಮಾಣದ ಗಾಯಗಳಾಗಿದ್ದು, ಯಾವುದೇ ಪ್ರಾಣಾಪಾಯವಿಲ್ಲ. ಪೊಲೀಸರು ಮಾಹಿತಿ ಪಡೆದು ತನಿಖೆ ಮುಂದುವರೆಸಿದ್ದಾರೆ.

### ತಿಮ್ಮಪ್ಪಯ್ಯನಹಳ್ಳಿ ಮಾರಮ್ಮ ದೇವಸ್ಥಾನದ ಹುಂಡಿ ಹಣ ಕದ್ದ ಕಳ್ಳರು

» ಚಳ್ಳಕೆರೆ

ತಾಲ್ಲೂಕಿನ ತಳಕು ಹೋಬಳಿಯ ತಿಮ್ಮಪ್ಪಯ್ಯನಹಳ್ಳಿ ಗ್ರಾಮದ ಮಾರಮ್ಮ ದೇವಸ್ಥಾನದ ಹುಂಡಿಯನ್ನು ಯಾರೋ ಕಳ್ಳರು ಕದ್ದು, ಅದರಲ್ಲಿದ್ದ ಹಣವನ್ನು ಲಪಡಾಯಿಸಿ ಖಾಲಿ ಹುಂಡಿಯನ್ನು ದೇವಸ್ಥಾನದಿಂದ ದೂರ ಬಿಸಾಕಿ ಪರಾರಿಯಾಗಿರುತ್ತಾರೆ. ಗುರುವಾರ ರಾತ್ರಿ ಈ ಘಟನೆ ನಡೆಸಿದ್ದು, ಬೆಳಗ್ಗೆ ದೇವಸ್ಥಾನಕ್ಕೆ ಬಂದ ಗ್ರಾಮಸ್ಥರು ದೇವಸ್ಥಾನದ ಹುಂಡಿ ಕಾಣದೇ ಇದ್ದಾಗ ಗಾಬರಿಗೊಂಡು ಹುಡುಕಾಡಿದಾಗ ಕಳ್ಳತನ ಪ್ರಕರಣ ಬೆಳಕಿಗೆ ಬಂದಿದೆ. ಪಿಎಸ್‌ಐ ಲೋಕೇಶ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

### ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ: ವಿವಿಧ ಯೋಜನೆಗಳಿಗೆ ಅರ್ಜಿ

» ಚಿತ್ರದುರ್ಗ

2023–24ನೇ ಸಾಲಿನಲ್ಲಿ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ವ್ಯಾಪ್ತಿಗೆ ಬರುವ ಅಲೆಮಾರಿ ಸಮುದಾಯದವರಿಗೆ ವಿವಿಧ ಯೋಜನೆಯಡಿ ಆರ್ಥಿಕ ಅಭಿವೃದ್ಧಿ ಹೊಂದಲು ವಿವಿಧ ಯೋಜನೆಗಳಿಗೆಅರ್ಹಫಲಾನುಭವಿಗಳಿಂದಅರ್ಜಿ ಆಹ್ವಾನಲಾಗಿದೆ. ಅರ್ಜಿ ಸಲ್ಲಿಸಲು ನವಂಬರ್ 30 ಕೊನೆಯ ದಿನ.ಪರಿಶಿಷ್ಟ ಜಾತಿ: ಸ್ವಯಂ ಉದ್ಯೋಗ (ನೇರಸಾಲ) ಯೋಜನೆ (ಘಟಕ ವೆಚ್ಚ ರೂ 1ಲಕ್ಷ), ಉದ್ಯಮಶೀಲತಾ ಯೋಜನೆ (ಘಟಕ ವೆಚ್ಚ ರೂ.2ಲಕ್ಷ), ಉದ್ಯಮಶೀಲತಾ ಯೋಜನೆ (ಸರಕು ಸಾಗಾಣಿಕೆ/ನಾಲ್ಕು ಚಕ್ರಗಳ ವಾಹನ ಹಾಗೂ ಇತ್ಯಾದಿ), ಭೂ ಒಡೆತನ ಯೋಜನೆಗೆ ಅರ್ಜಿ ಆಹ್ವಾನಿಸಲಾಗಿದೆ. ಪರಿಶಿಷ್ಟ ಪಂಗಡ: ಸ್ವಯಂ ಉದ್ಯೋಗ (ನೇರಸಾಲ) ಯೋಜನೆ (ಘಟಕ ವೆಚ್ಚ ರೂ 1ಲಕ್ಷ), ಉದ್ಯಮಶೀಲತಾ ಯೋಜನೆ (ಘಟಕ ವೆಚ್ಚ ರೂ.2ಲಕ್ಷ), ಉದ್ಯಮಶೀಲತಾ ಯೋಜನೆ (ಸರಕು ಸಾಗಣಿಕೆ ನಾಲ್ಕು ಚಕ್ರಗಳ ವಾಹನ ಹಾಗೂ ಇತ್ಯಾದಿ), ಭೂ ಒಡೆತನ ಯೋಜನೆ, ಮೈಕ್ರೋ ಕ್ರೆಡಿಟ್ ಯೋಜನೆ, ಗಂಗಾ ಕಲ್ಯಾಣ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಹ ಫಲಾಪೇಕ್ಷಿಗಳು ಸೇವಾಸಿಂಧು ಪೋರ್ಟಲ್ ಮೂಲಕ ಕರ್ನಾಟಕ ಒನ್, ಬೆಂಗಳೂರು ಒನ್, ಗ್ರಾಮ ಒನ್‌ಗಳಲ್ಲಿ ಅರ್ಜಿ ಸಲ್ಲಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಾರ್ಮಿಕ ಸಂಘಟನೆಗಳು ಹಾಗೂ ಉದ್ಯಮಿಗಳೊಂದಿಗೆ ಸಮಾಲೋಚನೆ ಸಭೆ

# ಅಸಂಘಟಿತ ವಲಯದ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ನೀಡಲು ಬದ್ಧ: ಸಂತೋಷ್ ಎಸ್ ಲಾಡ್

» ಚಿತ್ರದುರ್ಗ

ರಾಜ್ಯದಲ್ಲಿ ಅಸಂಘಟಿತ ವಲಯದ ವ್ಯಾಪ್ತಿಯಲ್ಲಿ ಬರುವ ಕಾರ್ಮಿಕರಿಗಾಗಿ ಸೂಕ್ತ ಕಾನೂನು ರೂಪಿಸಿ ಸಾಮಾಜಿಕ ಭದ್ರತೆ ನೀಡಲು ನಮ್ಮ ಸರ್ಕಾರ ಬದ್ಧವಾಗಿದೆ ಎಂದು ರಾಜ್ಯ ಕಾರ್ಮಿಕ ಸಚಿವ ಸಂತೋಷ್ ಎಸ್ ಲಾಡ್ ಅವರು ಭರವಸೆ ನೀಡಿದರು.





ಕಾರ್ಮಿಕ ಇಲಾಖೆ ವತಿಯಿಂದ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಕಾರ್ಮಿಕ ಸಂಘಟನೆಗಳು ಹಾಗೂ ಉದ್ಯಮದಾರರೊಂದಿಗಿನ ಸಮಾಲೋಚನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಪ್ರಸ್ತುತ ಸುಮಾರು 6500 ಕೋಟಿ ರೂ. ಅನುದಾನ ಲಭ್ಯವಿದ್ದು, ಈ ಅನುದಾನ ಅರ್ಹ ಫಲಾನುಭವಿಗಳ ಬದುಕು ಗಟ್ಟಿಗೊಳ್ಳಲು ಹಾಗೂ ಅವರು ಸ್ವಾಭಿಮಾನದಿಂದ ಜೀವನ ಸಾಗಿಸುವಂತಾಗಲು ಸದ್ಬಳಕೆಯಾಗಬೇಕು. ಕಟ್ಟಡ ಕಾರ್ಮಿಕರಲ್ಲದವರೂ ಕೂಡ ಸೌಲಭ್ಯದ ಆಸೆಗಾಗಿ ಬೋಗಸ್ ನೊಂದಣಿ ಮಾಡಿಸಿರುವ ಅಂಶ ಎಲ್ಲರಿಗೂ ತಿಳಿದಿದೆ. ಇಂತಹ ಬೋಗಸ್ ಕಾರ್ಡ್‌ಗಳನ್ನು ಪರಿಶೀಲಿಸಿ ರದ್ದುಪಡಿಸಬೇಕೆಂಬುದು ರಾಜ್ಯದ ಎಲ್ಲ ಕಾರ್ಮಿಕ ಸಂಘಟನೆಗಳ ಒಕ್ಕೊರಲ ಮನವಿಯಾಗಿದೆ. ಇಂತಹ ಬೋಗಸ್ ನೊಂದಣಿಯನ್ನು ತಡೆಯುವ ಉದ್ದೇಶದಿಂದಲೇ ಜಿಯೋ ಮ್ಯಾಪಿಂಗ್ ತಂತ್ರಾಂಶವನ್ನು ರೂಪಿಸುತ್ತಿದ್ದು, ಮೂರ್‍ನಾಲ್ಕು ತಿಂಗಳಲ್ಲಿ ಇಂತಹ ಅಕ್ರಮಗಳಿಗೆ ಕಡಿವಾಣ ಹಾಕುವ ವ್ಯವಸ್ಥೆ ಮಾಡಲಾಗುವುದು. ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿನ ಸೌಲಭ್ಯದಡಿ ವಿದ್ಯಾರ್ಥಿ ವೇತನಕ್ಕಾಗಿಯೇ 13 ಲಕ್ಷ ಅರ್ಜಿಗಳು ಬಂದಿವೆ. ಮದುವೆಯಾಗಿ 07 ವರ್ಷವಾಗಿದ್ದಂತಹವರೂ ಕೂಡ ಮದುವೆ ಧನಸಹಾಯಕ್ಕಾಗಿ ಅರ್ಜಿ ಸಲ್ಲಿಸುತ್ತಾರೆ, ಈ ರೀತಿ ದುರುಪಯೋಗದ ಅನೇಕ ಸಂಗತಿಗಳು ಬೆಳಕಿಗೆ ಬರುತ್ತಿವೆ. ಕಾರ್ಮಿಕ ಸಂಘಟನೆಗಳು ಕಾರ್ಮಿಕರ ಮಕ್ಕಳಿಗಾಗಿ ಅಂಗನವಾಡಿ, ಶಾಲೆಗಳನ್ನು ಕಟ್ಟಿ ಎಂದು ಬೇಡಿಕೆ ಸಲ್ಲಿಸುತ್ತಾರೆ, ಆದರೆ ಇದು ಕಾರ್ಮಿಕ ಇಲಾಖೆಯ ಕೆಲಸ ಅಲ್ಲ, ಇದಕ್ಕಾಗಿ ಮಂಡಳಿಯ ಹಣ ಖರ್ಚು ಮಾಡುವುದು ಸರಿಯಲ್ಲ ಎಂದರು. ಕಾರ್ಮಿಕರ ಕನಿಷ್ಟ ವೇತನವನ್ನು ಹೆಚ್ಚಿಸಲು ಚಿಂತನೆ ನಡೆಸಿದ್ದು, ನಮ್ಮ ಸರ್ಕಾರ ಬಡವರ ಪರವಾಗಿದ್ದು, ಬಡವರಿಗಾಗಿಯೇ ಯೋಜನೆ ರೂಪಿಸುತ್ತೇವೆ, ಆದರೆ ಸ್ವಲ್ಪ ಸಮಯಾವಕಾಶ ನೀಡಬೇಕು ಎಂದರು.

ರಾಜ್ಯದಿಂದ 43 ವಿವಿಧ ಕ್ಷೇತ್ರಗಳು ಹಾಗೂ ಕೇಂದ್ರದ 397 ಕ್ಷೇತ್ರಗಳನ್ನು ಅಸಂಘಟಿತ ಕಾರ್ಮಿಕ ವಲಯವೆಂದು ಪರಿಗಣಿಸಲಾಗಿದೆ. ರಾಜ್ಯದಲ್ಲಿ ಅಸಂಘಟಿತ ಕಾರ್ಮಿಕ ವಲಯ ವ್ಯಾಪ್ತಿಯ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ನೀಡಲು ಕ್ರಮ ವಹಿಸಲಾಗಿದ್ದು, ಆಟೋ ಚಾಲಕರು, ವಾಣಿಜ್ಯ ವಾಹನಗಳ ವಾಹನ ಚಾಲಕರು, ಗ್ಯಾರೇಜ್‌ಗಳ ಕಾರ್ಮಿಕರು ಸೇರಿದಂತೆ ರಾಜ್ಯದ ಸುಮಾರು 40 ರಿಂದ 50 ಲಕ್ಷ ಜನರಿಗೆ ಸಾಮಾಜಿಕ ಭದ್ರತೆ ಕಲ್ಪಿಸಲು ಯೋಜನೆ ರೂಪಿಸಲಾಗುತ್ತಿದೆ. ಸಿನಿಮಾ ಮಂದಿರಗಳಲ್ಲಿನ ಕಾರ್ಮಿಕರಿಗೆ ಪ್ರತಿ ಟಿಕೆಟ್‌ಗೆ ಇಂತಿಷ್ಟು ಎಂದು ಸೆಸ್ ಸಂಗ್ರಹಿಸಿ, ಈ ಮೊತ್ತಕ್ಕೆ ಸರ್ಕಾರದ ಹಣವನ್ನೂ ಸೇರಿಸಿ, ಸಿನಿಮಾ ಮಂದಿರ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಕಲ್ಪಿಸಲಾಗುವುದು, ಆಸ್ತಿ ತೆರಿಗೆಯಲ್ಲೂ ಶೇ. 06 ರಷ್ಟು ಕಾರ್ಮಿಕರ ಕಲ್ಯಾಣಕ್ಕೆ ಸೆಸ್ ಸಂಗ್ರಹಿಸಲು ಯತ್ನಿಸಲಾಗುತ್ತಿದ್ದು, ಹೋಟೆಲ್ ಕಾರ್ಮಿಕರು, ಹಮಾಲರು ಮುಂತಾದ ಅಸಂಘಟಿತ ವಲಯದ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ದೊರಕಿಸಲು ಸೂಕ್ತ ಕಾನೂನು ರೂಪಿಸಲಾಗುವುದು ಎಂದು ಸಚಿವರು ಹೇಳಿದರು.

ಕಟ್ಟಡ ಕಾಮಿಕರ ಸಂಘದ ಸುರೇಶ್ ಬಾಬು ಮಾತನಾಡಿ, ಸಿನಿಮಾ ಚಿತ್ರಮಂದಿರ ಕಾರ್ಮಿಕರಿಗೆ ಯಾವುದೇ ಭದ್ರತೆ ಇಲ್ಲ, ಅದೇ ರೀತಿ ಎಪಿಎಂಸಿ ಯಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಕೂಡ ಸೇವಾ ಭದ್ರತೆ ಇಲ್ಲ, ಸೂಕ್ತ ಕಾನೂನು ತಿದ್ದುಪಡಿಗೊಳಿಸಿ ಸೇವಾಭದ್ರತೆ ಕಲ್ಪಿಸುವಂತೆ ಹಾಗೂ ಸ್ಥಗಿತಗೊಂಡಿರುವ ಸ್ಕಾಲರ್‌ಶಿಪ್ ಬಿಡುಗಡೆ ಮಾಡುವಂತೆ ಕೋರಿದರು.

ಶಫಿ ಉಲ್ಲಾ ಮಾತನಾಡಿ, ಬೋಗಸ್ ಕಾರ್ಡ್ ನೊಂದಣಿ ತಡೆಗಟ್ಟಬೇಕು, ಇಲ್ಲದಿದ್ದರೆ ನಿಜವಾದ ಕಾರ್ಮಿಕರಿಗೆ ಅನ್ಯಾಯವಾದಂತಾಗುತ್ತದೆ. ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತಾ ಮಂಡಳಿ ರೂಪಿಸಿ ಗುರುತಿನ ಕಾರ್ಡ್ ನೀಡಬೇಕು ಎಂದರು.

ಗೌಸ್ ಪೀರ್ ಮಾತನಾಡಿ, ಕಟ್ಟಡ ಕಾರ್ಮಿಕರ ವಿವಾಹ ಧನ ಸಹಾಯ ಮೊತ್ತ ಸಮರ್ಪಕವಾಗಿ ಬಿಡುಗಡೆ ಆಗುತ್ತಿಲ್ಲ, ಲ್ಯಾಪ್‌ಟಾಪ್ ನೀಡುವ ಯೋಜನೆಯಡಿ 3500 ಅರ್ಜಿಗಳು ಸ್ವೀಕೃತಗೊಂಡಿದ್ದು, ಕೇವಲ 150 ಜನರಿಗೆ ಮಾತ್ರ ಲ್ಯಾಪ್‌ಟಾಪ್ ನೀಡಲಾಗಿದೆ, ಆದರೆ ಲ್ಯಾಪ್‌ಟಾಪ್ ಯೋಜನೆಯ ಬದಲು ಕಾರ್ಮಿಕರ ಹಿತಕ್ಕಾಗಿ ಬೇರೆ ಯೋಜನೆ ರೂಪಿಸಬಹುದಿತ್ತು, ಕಾರ್ಮಿಕರ ಆರೋಗ್ಯ ಚಿಕಿತ್ಸೆಗಾಗಿ ಜಿಲ್ಲೆಗೊಬ್ಬರು ಡಾಕ್ಟರ್ ನೇಮಿಸಬೇಕು, ಬೋಗಸ್ ಕಾರ್ಡ್‌ಗಳನ್ನು ಗುರುತಿಸಿ, ರದ್ದುಪಡಿಸಬೇಕು ಎಂದು ಮನವಿ ಮಾಡಿದರು. ಉಳಿದಂತೆ ವಿವಿಧ ಕಾರ್ಮಿಕ ಸಂಘಟನೆಗಳ ಪದಾಧಿಕಾರಿಗಳು ಕೂಡ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿ, ಬೋಗಸ್ ಕಾರ್ಡ್‌ಗಳನ್ನು ಸೃಷ್ಟಿಸಿ ಸೌಲಭ್ಯ ದುರುಪಯೋಗ ಪಡಿಸಿಕೊಂಡವರ ಮೇಲೆ ಕ್ರಮ ಕೈಗೊಳ್ಳಬೇಕು, ಇದಕ್ಕೆ ಸಹಕರಿಸಿದಂತಹ ಕಾರ್ಮಿಕ ಸಂಘಟನೆಗಳನ್ನು ಕಪ್ಪುಪಟ್ಟಿಗೆ ಸೇರಿಸಬೇಕು. ಹಮಾಲಿಗಳಿಗೆ ಕನಿಷ್ಟ ವೇತನ ಜಾರಿಯಾಗಬೇಕು, ಅಲ್ಲದೆ ವಸತಿ ರಹಿತ ಹಮಾಲಿಗಳಿಗೆ ಮನೆ ನೀಡಬೇಕು, ಸ್ಲಂ ಬೋರ್ಡ್ ಮೂಲಕ ಒದಗಿಸಿದ ಮನೆಗಳಿಗೆ ಹಣ ಪಾವತಿಯಾಗಿಲ್ಲ, ಹೆರಿಗೆ ಭತ್ಯೆಯನ್ನು ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮಾ ಮಾಡುವಂತಾಗಬೇಕು, ವಲಸೆ ಕಾರ್ಮಿಕರಿಗೆ ಈ ಹಿಂದೆ ನೀಡಲಾಗುತ್ತಿದ್ದ ಕೆಎಸ್‌ಆರ್‌ಟಿಸಿ ಉಚಿತ ಬಸ್ ಪಾಸ್ ಅನ್ನು ಸ್ಥಗಿತಗೊಳಿಸಲಾಗಿದ್ದು, ಇದನ್ನು ಪುನರಾರಂಭಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಕಾರ್ಮಿಕ ಇಲಾಖೆ ಆಯುಕ್ತ ಗೋಪಾಲಕೃಷ್ಣ, ಕಟ್ಟಡ ಕಾರ್ಮಿಕ ಕಲ್ಯಾಣ ಮಂಡಳಿಯ ಮುಖ್ಯ ಕಾರ್ಯನಿವಾಹಕ ಅಧಿಕಾರಿ ಭಾರತಿ, ಕಾರ್ಮಿಕ ಇಲಾಖೆ ವಲಯದ ಹೆಚ್ಚುವರಿ ಆಯುಕ್ತ ಮಂಜುನಾಥ್, ಕಾರ್ಖಾನೆ ಮತ್ತು ಬಾಯ್ಲರ್ ವಿಭಾಗದ ನಿರ್ದೇಶಕ ಶ್ರೀನಿವಾಸ್, ಜಿಲ್ಲಾ ಕಾರ್ಮಿಕ ಅಧಿಕಾರಿ ಇಬ್ರಾಹಿಂ ಸೇರಿದಂತೆ ಇತರ ಅಧಿಕಾರಿಗಳು, ವಿವಿಧ ಕಾರ್ಮಿಕ ಸಂಘಟನೆಗಳ ಪದಾಧಿಕಾರಿಗಳು, ಉದ್ಯಮಿಗಳು ಉಪಸ್ಥಿತರಿದ್ದರು.

## ನಗರದಲ್ಲಿ 11 ದೇವತೆಗಳ ಸಮಾಗಮ ಊರಹಬ್ಬ



» ಚಿತ್ರದುರ್ಗ

ಆರ್ಯ ವೈಶ್ಯ ಸಂಘ ಮತ್ತು ಜೈ ವಾಸವಿ ಮಿತ್ರ ವೃಂದ ಇವರ ಸಂಯುಕ್ತಾಶ್ರಯದಲ್ಲಿ ನ. 05 ರ ಭಾನುವಾರ ಹನ್ನೊಂದು ದೇವತೆಗಳ ಸಮಾಗಮ ಊರಹಬ್ಬ ಮತ್ತು ಲೋಕ ಕಲ್ಯಾಣಕ್ಕಾಗಿ ಪಂಚ್ಯಗವ್ಯ ಹೋಮವನ್ನು ನಗರದ ಕನ್ಯಕಾಪರಮೇಶ್ವರಿ ದೇವಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಆರ್ಯವೈಶ್ಯ ಸಂಘದ ಗೌರವಾಧ್ಯಕ್ಷರಾದ ಎಸ್.ಎನ್. ಕಾಶಿ ವಿಶ್ವನಾಥ್ ಶೆಟ್ಟಿ ಮತ್ತು ಅಧ್ಯಕ್ಷರಾದ ಎಂ.ಕೆ.ವೆಂಕಟೇಶ್ ತಿಳಿಸಿದ್ದಾರೆ. ಜೈ ವಾಸವಿ ಮಿತ್ರ ವೃಂದದ 14ನೇ ವರ್ಷದ ವಾರ್ಷಿಕೋತ್ಸವದ ಪ್ರಯುಕ್ತ ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಇದರಲ್ಲಿ ಶ್ರೀ ಕನ್ಯಕಾಪರಮೇಶ್ವರಿ, ಶ್ರೀ ಏಕನಾಥೇಶ್ವರಿ ಶ್ರೀ ಉಚ್ಚಂಗಿಯಲ್ಲಮ್ಮ, ಶ್ರೀ ಬರಗೇರಮ್ಮ, ಶ್ರೀ ಗೌರಸಂದ್ರ ಮಾರಮ್ಮ, ಶ್ರೀ ಕಾಳಿಕಮಠೇಶ್ವರಿ, ಶ್ರೀ ದುರ್ಗಾದೇವಿ, ಶ್ರೀ ಬುಡ್ಡಾಂಬಿಕದೇವಿ, ಶ್ರೀ ಬನಶಂಕರಿ ಶ್ರೀ ಚೇಳುಗುಡ್ಡ ಗೌರಸಂದ್ರ ಹಾಗೂ ಶ್ರೀ ದೊಡ್ಡ ಮಾರಮ್ಮ ಅಮ್ಮನವರು ಆಗಮಿಸಲಿದ್ದಾರೆ. ಅಂದು ಬೆಳಿಗ್ಗೆ 8 ಗಂಟೆಗೆ ಅಮ್ಮನವರನ್ನು ಮೆರವಣಿಗೆಯ ಮೂಲಕ ಸಿಹಿನೀರಿನ ಹೊಂಡದಿಂದ ಕರೆದುಕೊಂಡು ನಗರದ ವಾಸವಿ ಮಹಲ್ ರಸ್ತೆಯಲ್ಲಿನ ಶ್ರೀ ಕನ್ಯಕಾ ಪರಮೇಶ್ವರಿ ದೇವಾಲಯಕ್ಕೆ ಬರಲಾಗುವುದು. ಅಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 6 ರವರೆಗೆ ಭಕ್ತಾಧಿಗಳಿಗೆ ಅಮ್ಮನವರ ದರ್ಶನಕ್ಕೆ ಅವಕಾಶವನ್ನು ಕಲ್ಪಿಸಲಾಗಿದೆ, ಅಲ್ಲದೆ ಅಮ್ಮನವರಿಗೆ ಮಡಿಲು ಅಕ್ಕಿಯನ್ನು ಹಾಕುವುದಕ್ಕೂ ಸಹಾ ಅವಕಾಶವನ್ನು ಕಲ್ಪಿಸಲಾಗಿದೆ.



ಚಳ್ಳಕೆರೆ ತಾಲ್ಲೂಕಿನ ತಾಲ್ಲೂಕಿನ ಚಿತ್ರನಾಯಕನಹಳ್ಳಿ ಗ್ರಾಮದ ವಿಕಾಸ್ ಬ್ಯಾಂಕ್ ಆವರಣದಲ್ಲಿ ಕನ್ನಡ ರಾಜ್ಯೋತ್ಸವ ಹಿನ್ನೆಲೆಯಲ್ಲಿ ತಪಸ್ ಫೌಂಡೇಷನ್ ವತಿಯಿಂದ ಸಸಿ ನೆಟ್ಟರು.

## ಪ್ರಮುಖ ಸುದ್ದಿ

# ಈ ಬಾರಿ ಎಂಪಿ ಟಿಕೆಟ್ ಸ್ಥಳೀಯರಿಗೆ ನೀಡುವಂತೆ ಒತ್ತಾಯ

» ಚಿತ್ರದುರ್ಗ

2024ರ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದಿಂದ ಹೊರಗಿನವರಿಗೆ ಪಕ್ಷದ ಟೀಕೇಟನ್ನು ನೀಡದೆ ಸ್ಥಳೀಯರಿಗೆ ಟಿಕೇಟನ್ನು ನೀಡುವುದರ ಮೂಲಕ ಚಿತ್ರದುರ್ಗ ಲೋಕಸಭಾ ಕ್ಷೇತ್ರವನ್ನು ಉಳಿಸಿಕೊಳ್ಳಬೇಕಿದೆ ಎಂದು 2009ರ ಲೋಕಸಭಾ ಚುನಾವಣೆಯ ಕಾಂಗ್ರೆಸ್ ಪರಾಜಿತ ಅಭ್ಯರ್ಥಿ ಡಾ.ಬಿ.ತಿಪ್ಪೇಸ್ವಾಮಿ (ಜೆ.ಜೆ.ಹಟ್ಟಿ) ಪಕ್ಷದ ಮುಖಂಡರನ್ನು ಒತ್ತಾಯಿಸಿದ್ದಾರೆ.



ಚಿತ್ರದುರ್ಗ ನಗರದಲ್ಲಿ ಗುರುವಾರ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದಲ್ಲಿ ವಿವಿಧ ರೀತಿಯ ಹುದ್ದೆಗಳನ್ನು ಮಾಡಿಕೊಂಡು ಬಂದಿರುವ ನಾನು ಜಿಲ್ಲೆಯಲ್ಲಿ ಪಕ್ಷವನ್ನು ಸಂಘಟನೆ ಮಾಡುವಲ್ಲಿ ಪ್ರಮುಖವಾದ ಪಾತ್ರವನ್ನು ವಹಿಸಿದ್ದೇನೆ, 2009ರ ಚುನಾವಣೆಯಲ್ಲಿ ರಾಜ್ಯದಲ್ಲಿ ಬಿಜೆಪಿ ಸರ್ಕಾರ ಇದ್ದು ಅಂದು ಈ ಕ್ಷೇತ್ರದಲ್ಲಿ 4 ಜನ ಸಚಿವರು ಇಬ್ಬರು ಎಂ.ಎಲ್.ಎಗಳು, ಇದ್ದು, ನಮ್ಮ ಪಕ್ಷದಲ್ಲಿ ಹಲವಾರು ಜನತೆ ಪಕ್ಷವನ್ನು ಬಿಟ್ಟು ಹೋಗಿದ್ದರಿಂದ ನನಗೆ ಸೋಲಾಯಿತು ಅದರಲ್ಲೂ ಸಹಾ 2.50 ಲಕ್ಷ ಮತವನ್ನು ಪಡೆದಿದೆ ಎಂದರು.

ಕಳೆದ 2–3 ಬಾರಿ ಲೋಕಸಭಾ ಚುನಾವಣೆಯಲ್ಲಿ ಹೊರಗಿನವರಿಗೆ ಅವಕಾಶವನ್ನುನೀಡಲಾಗಿದ್ದುಸ್ಥಳಿಯರನ್ನು ಕಡೆಗಣಿಸಲಾಗಿದೆ. ಈಗ ಕ್ಷೇತ್ರದಲ್ಲಿ ಹೊರಗಿನವರು ಗೆದ್ದರು ಸಹಾ ಯಾವುದೇ ರೀತಿಯ ಅಭಿವೃದ್ಧಿ ಕಾರ್ಯವನ್ನು ಮಾಡಿಲ್ಲ, 2014ರ ಚುನಾವಣೆಯಲ್ಲಿ ಕ್ಷೇತ್ರದಲ್ಲಿ ನನ್ನ ಬಗ್ಗೆ ಒಲವು ಇದ್ದರೂ ಸಹಾ ನಮ್ಮ ಪಕ್ಷದವರಿಂದ ನನಗೆ ಟೀಕೇಟ್ ತಪ್ಪಿತು. ಆಗ ಚಂದ್ರಪ್ಪರವರಿಗೆ ಟಿಕೇಟ್ ನೀಡುವುದರ ಮೂಲಕ ಅವರನ್ನು ಗೆಲ್ಲಿಸಲಾಯಿತು.

ಈಗ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದು, ಕಾಂಗ್ರೆಸ್‌ನ ಗ್ಯಾರೆಂಟಿಗಳು ಜನ ಪ್ರಯತೆಯನ್ನು ಹೊಂದಿದ್ದು ಇದರಿಂದ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಹೆಚ್ಚು ಜನ ಸದಸ್ಯರಾಗಲಿದ್ದಾರೆ ಎಂದರು.

ಲೋಕಸಭಾ ಸದಸ್ಯರಾದವರಿಗೆ ತಮ್ಮದೇ ಆದ ಜವಾಬ್ದಾರಿಗಳು ಇವೆ, ಜಿಲ್ಲೆಯ ಜೀವನಾಡಿಯಾದ ಅಪ್ಪರ್ ಭದ್ರಾ ಯೋಜನೆ, ದಾವಣಗೆರೆ–ತುಮಕೂರು ನೇರ ರೈಲ್ವೆ ಮಾರ್ಗ ತುಂಗಾ ಭದ್ರಾ ಹಿನ್ನೀರು ಯೋಜನೆ ಸೇರಿದಂತೆ ವಿವಿಧ ಯೋಜನೆಗಳ ಅನುಷ್ಠಾನದ ಬಗ್ಗೆ ಕೆಲಸ ಮಾಡಬೇಕಿದೆ ಆದರೆ ಇದುವರೆವಿಗೂ ಗೆದ್ದ ಯಾವ ಲೋಕಸಭಾ ಸದಸ್ಯರು ಸಹಾ ಇದರ ಬಗ್ಗೆ ಕೆಲಸವನ್ನು ಮಾಡಿಲ್ಲ, ಇದರ ಬಗ್ಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ಮೇಲೆ ಒತ್ತಡವನ್ನು ತರುವುದರ ಮೂಲಕ ಅನುಷ್ಠಾನವನ್ನು ಮಾಡಿಸಬೇಕಿದೆ.

ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಹೊರಗಿನಿಂದ ತಂದು ಚುನಾವಣೆಯಲ್ಲಿ ಗೆಲ್ಲಿಸಿದ ಸದಸ್ಯರಿಂದ ಚಿತ್ರದುಗ್ ಯಾವುದೇ ಅಭೀವೃದ್ದಿಯನ್ನು ಕಂಡಿಲ್ಲ, ಈ ಹಿನ್ನಲೆಯಲ್ಲಿ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದಿಂದ ಸ್ಥಳೀಯವಾಗಿ ಇರುವವರೆಗು ಪಕ್ಷದ ಟೀಕೇಟನ್ನು ನೀಡುವುದರ ಮೂಲಕ ಚಿತ್ರದುರ್ಗ ಲೋಕಸಭಾ ಕ್ಷೇತ್ರವನ್ನು ಕಾಂಗ್ರೆಸ್ ಮಡಿಲಿಗೆ ತರಬೇಕಿದೆ ಎಂದು ತಿಪ್ಪೇಸ್ವಾಮಿ ಹೇಳಿದರು.

ಚಿತ್ರದುರ್ಗ ಜಿಲ್ಲೆಯಲ್ಲಿ ರಾಜ್ಯ ಸರ್ಕಾರ ಬರ ಎಂದು ಘೋಷಣೆ ಮಾಡಿದೆ ಈ ಹಿನ್ನಲೆಯಲ್ಲಿ ಇಲ್ಲಿನ ರೈತರಿಎಗ ಹೆಚ್ಚಿನ ರೀತಿಯ ಅನುಕೂಲವನ್ನು ಮಾಡಿಕೊಡಬೇಕಿದೆ. ಇದರ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜನ ಖರ್ಗೆ ಹಾಗೂ ಕಂದಾಯ ಸಚಿವರಾದ ಕೃಷ್ಣ ಬೈರೇಗೌಡರವರು ಹೆಚ್ಚಿನ ರೀತಿಯಲ್ಲಿ ಒತ್ತು ನೀಡುವುದರ ಮೂಲಕ ರೈತರಿಗೆ ನರವಾಗಬೇಕಿದೆ ಎಂದು ಒತ್ತಾಯಿಸಿದ್ದು, 2014ರ ಲೋಕಸಭಾ ಚುನಾವಣೆಯಲ್ಲಿ ನನಗೆ ಟೀಕೇಟ್ ಸಿಗುವುದರಲ್ಲಿತ್ತು ಆದರೆ ನಮ್ಮವರೆ ನನಗೆ ಮೋಸ ಮಾಡಿ ಅದನ್ನು ತಪ್ಪಿಸಿದರು, ಇದ್ದಲ್ಲದೆ ಎಂಎಲ್‌ಸಿ ಸ್ಥಾನವೂ ಸಹಾ ನನಗೆ ಲಭ್ಯವಾಗುತ್ತಿತು ಆದನ್ನು ಸಹಾ ನಮ್ಮ ಪಕ್ಷದವರೇ ಮೋಸದಿಂದ ತಪ್ಪಿಸಿದ್ದಾರೆ, ಇದರೊಂದಿಗೆ ನಿಗಮ ಮಂಡಳಿಗೆ ಅಧ್ಯಕ್ಷನನ್ನಾಗಿ ಮಾಡಲು ನಮ್ಮ ಮುಖಂಡರು ಸಿದ್ದರಿದ್ದರು ಅದನ್ನು ಸಹಾ ನಮ್ಮವರೇ ತಪ್ಪಿಸಿದ್ದಾರೆ ಇಷ್ಟೇಲ್ಲಾ ನೋವನ್ನು ನಾನು ಸಹಿಸಿಕೊಂಡಿದ್ದೇನೆ ಅಲ್ಲದೆ ಈ ಭಾರಿ ಲೋಕಸಭಾ ಚುನಾವಣೆಯಲ್ಲಿಕೆಲಸವನ್ನುಮಾಡುವಂತೆ ಪಕ್ಷದ ವರಿಷ್ಠರು ಸೂಚನೆಯನ್ನು ನೀಡಿದ್ದಾರೆ ಈ ಹಿನ್ನಲೆಯಲ್ಲಿ ನಾನು ಈಗಾಗಲೇ ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಪ್ರವಾಸವನ್ನು ಮಾಡುವುದರ ಮೂಲಕ ಮತದಾರರನ್ನು ಬೇಟಿ ಮಾಡಿ ಮತಯಾಚನೆಯನ್ನು ಮಾಡುತ್ತಿದ್ದೇನೆ ಮತದಾರರು ಸಹಾ ಒಲವನ್ನು ತೋರಿಸುತ್ತಿದ್ದಾರೆ ಏನೇ ಆದರೂ ಸಹಾ ಈ ಬಾರಿ ಲೋಕಸಭಾ ಚುನಾವಣೆಯ ಟೀಕೇಟ್ ಸ್ಥಳಿಯರಿಗೇ ನೀಡಬೇಕೆಂದು ಆಗ್ರಹಿಸುತ್ತಿದ್ದಾರೆ ಎಂದು ತಿಳಿಸಿದರು.

ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ 12.50 ಲಕ್ಷ ಮತದಾರರಿದ್ದು ಇದರಲ್ಲಿ 8.50 ಲಕ್ಷ ಎಸ್.ಸಿ. ಜನಾಂಗದವರಿದ್ದು, ಇದರಲ್ಲಿ 4.50 ಲಕ್ಷ ಎಡ ಸಮುದಾಯವರಿದ್ದಾರೆ ಈ ಭಾರಿ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷದ ಐದು ಜನ ಶಾಸಕರಿದ್ದಾರೆ ಓರ್ವ ಮಂತ್ರಿಗಳಿದ್ದಾರೆ. ಪಕ್ಷದ ಕಾರ್ಯಕರ್ತರು ಹುಮ್ಮನಿಸಿಂದ ಇದ್ದಾರೆ. ಈ ಹಿನ್ನಲೆಯಲ್ಲಿ ಈ ಭಾರಿ ಸ್ಥಳಿಯರಿಗೆ ಟಿಕೇಟ್‌ನ್ನು ನೀಡುವಂತೆ ತಿಪ್ಪೇಸ್ವಾಮಿ ಪಕ್ಷದ ಮುಖಂಡರನ್ನು ಒತ್ತಾಯಿಸಿದ್ದಾರೆ.

ಗೋಷ್ಟಿಯಲ್ಲಿ ನಗರಸಭೆ ಮಾಜಿ ಅಧ್ಯಕ್ಷ ಹೆಚ್.ಮಂಜಪ್ಪ, ಲಿಡ್ಕರ್ ನಿಗಮದ ಮಾಜಿ ಅಧ್ಯಕ್ಷ ಓ.ಶಂಕರ್, ಆಶ್ವಕ್ ಆಲಿ, ಉಮೇಶ್, ಪರಮೇಶ್, ರಾಜು, ಶಿವಮೂರ್ತಿ, ಪ್ರಕೃದ್ದೀನ್, ನಯಾಜ್, ಅಬ್ದುಲ್, ಚಂದ್ರಣ್ಣ, ಬಾಷಾ, ಪ್ರಕಾಶ್, ರಮೇಶ್ ರಾಜಣ್ಣ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಫಸಲ್ ವಿಮಾ ಯೋಜನೆ: ಹಿಂಗಾರು ಹಂಗಾಮು ವಿಮೆ ನೊಂದಣಿ

» ಚಿತ್ರದುರ್ಗ

2023-24ನೇ ಸಾಲಿನ ಹಿಂಗಾರು ಹಂಗಾಮಿನಲ್ಲಿ ಈರುಳ್ಳಿ (ನೀರಾವರಿ) ಬೆಳೆಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ವಿಮೆ ನೊಂದಣಿಗೆ ಡಿಸೆಂಬರ್ 1 ಕೊನೆಯ ದಿನವಾಗಿದೆ. ಚಿತ್ರದುರ್ಗ ತಾಲ್ಲೂಕಿನ ಕಸಬಾ ಹಾಗೂ ತುರುವನೂರು ಹೋಬಳಿ, ಚಳ್ಳಕೆರೆ ತಾಲ್ಲೂಕಿನ ಕಸಬಾ ಹಾಗೂ ತಳಕು ಹೋಬಳಿ, ಹಿರಿಯೂರು ತಾಲ್ಲೂಕಿನ ಐಮಂಗಲ ಹಾಗೂ ಜೆ.ಜಿ.ಹಳ್ಳಿ ಹೋಬಳಿಗಳಲ್ಲಿ ಈರುಳ್ಳಿ (ನೀರಾವರಿ) ಬೆಳೆಯನ್ನು ಅಧಿಸೂಚಿಸಲಾಗಿದೆ. 2023ರ ಹಿಂಗಾರು ಹಂಗಾಮಿನಲ್ಲಿ ಈರುಳ್ಳಿ ನೀರಾವರಿ ಬೆಳೆಗೆ ಪ್ರತಿ ಹೆಕ್ಟೇರ್ ವಿಮಾ ಮೊತ್ತ ರೂ.80500/- ಮತ್ತು ರೈತರ ವಿಮಾ ಕಂತು ರೂ.4025/- ಆಗಿರುತ್ತದೆ.ಅಧಿಸೂಚಿತ ಬೆಳೆಗಳ ವಿಮೆಯನ್ನು ಬ್ಯಾಂಕ್‌ಗಳಲ್ಲಿ, ಸಾಮಾನ್ಯ ಸೇವಾ ಕೇಂದ್ರ, ಆರ್ಥಿಕ ಸಂಸ್ಥೆಗಳಲ್ಲಿ ನೊಂದಣಿ ಮಾಡಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಸಮೀಪದ ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಹಾಗೂ ರೈತ ಸಂಪರ್ಕ ಕೇಂದ್ರ ಸಹಾಯಕ ತೋಟಗಾರಿಕೆ ಅಧಿಕಾರಿಗಳನ್ನು ಅಥವಾ ಹತ್ತಿರದ ಬ್ಯಾಂಕುಗಳ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ತೊಟಗಾರಿಕೆ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಇಂದು ವಿದ್ಯುತ್ ವ್ಯತ್ಯಯ

» ಚಿತ್ರದುರ್ಗ

ಬೆಸ್ಕಾಂ ಚಿತ್ರದುರ್ಗ ಗ್ರಾಮೀಣ ಉಪ ವಿಭಾಗ ವ್ಯಾಪ್ತಿಯಲ್ಲಿ ಬರುವ ತುರುವನೂರು ಶಾಖಾ ವ್ಯಾಪ್ತಿಯಲ್ಲಿ ಬರುವ ತುರುವನೂರು ಗ್ರಾಮದಲ್ಲಿ ವಸತಿ ವಿನ್ಯಾಸದ ವಿದ್ಯುಧಿಕರಣ ಕಾಮಗಾರಿ ಹಮ್ಮಿಕೊಂಡಿರುವುದರಿಂದ ನವೆಂಬರ್ 4ರಂದು ಬೆಳ್ಳಿಗೆ 11 ರಿಂದ ಸಂಜೆ 4 ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ವಿದ್ಯುತ್ ಆಡಚಣೆಯಾಗುವ ಮಾರ್ಗಗಳು: ತುರುವನೂರು, ಕರಿಯಮ್ಮನಹಟ್ಟಿ, ಪೇಲೂರಹಟ್ಟಿ 11ಕೆ.ವಿ. ಮಾರ್ಗಗಳು. ವಿದ್ಯುತ್ ವ್ಯತ್ಯಯ ಆಗುವ ಪ್ರದೇಶಗಳು: ತುರುವನೂರು ವ್ಯಾಪ್ತಿಯ ತುರುವನೂರು, ಕೂನಬೇವು, ಬೆಳಗಟ್ಟ ಮತ್ತು ಗೋನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಾಗೂ ದ್ಯಾಮವ್ವನಹಳ್ಳಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಗ್ರಾಹಕರು ಸಹಕರಿಸಬೇಕು ಎಂದು ಚಿತ್ರದುರ್ಗ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

### ನಾಳೆ ವಿದ್ಯುತ್ ವ್ಯತ್ಯಯ

» ಚಿತ್ರದುರ್ಗ

ಬೆಸ್ಕಾಂ ಚಿತ್ರದುರ್ಗ ಗ್ರಾಮೀಣ ಉಪ ವಿಭಾಗ ವ್ಯಾಪ್ತಿಯಲ್ಲಿ ಬರುವ ಭರಮಸಾಗರ ಶಾಖಾ ವ್ಯಾಪಿಯ ಭರಮಸಾಗರ ಗ್ರಾಮದಲ್ಲಿ ವಸತಿ ವಿನ್ಯಾಸದ ವಿದ್ಯುಧಿಕರಣ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ, ನವಂಬರ್ 5 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ವಿದ್ಯುತ್ ಅಡಚಣೆಯಾಗುವ ಮಾರ್ಗಗಳು: ಹೆಗ್ಗೆರೆ, ಎಮ್ಮೆಹಟ್ಟಿ, ನಲ್ಲಿಕಟ್ಟೆ, ಕೊಳಹಾಳ್ ಎನ್.ಜೆ.ವೈ, ಹೆಗಡೆಹಾಳ್, ವಿಜಾಪುರ, ಶಿವನಕೆರೆ, ನಂದಿಹಳ್ಳಿ, ಬಹದ್ದೂರಗಟ್ಟ, ಅಡವಿಗೊಲ್ಲರಹಳ್ಳಿ, ಭರಮಸಾಗರ, ಪಾಮರಹಳ್ಳಿ, ಕೋಗುಂಡೆ, ಕೋಡಿಹಳ್ಳಿ, ಹರಳಕಟ್ಟೆ 11ಕೆ.ವಿ. ಮಾರ್ಗಗಳು. ವಿದ್ಯುತ್ ವ್ಯತ್ಯಯ ಆಗುವ ಪ್ರದೇಶಗಳು: 66/11 ಕೆವಿ ಭರಮಸಾಗರ ವ್ಯಾಪ್ತಿಯ ಹೆಗ್ಗೆರೆ, ಎಮ್ಮೆಹಟ್ಟಿ, ಕೊಳಹಾಳ್‌ಹೆಗಡೆಹಾಳ್,ಶಿವನಕೆರೆ,ಚಿಕ್ಕಬೆನ್ನೂರು, ನಂದಿಹಳ್ಳಿ, ಬಹದ್ದೂರಗಟ್ಟ, ಅಡವಿಗೊಲ್ಲರಹಳ್ಳಿ, ಭರಮಸಾಗರ, ಪಾಮರಹಳ್ಳಿ, ಕೋಗುಂಡೆ, ಕೋಡಿಹಳ್ಳಿ, ಹರಳಕಟ್ಟೆ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಗ್ರಾಹಕರು ಸಹಕರಿಸಬೇಕು ಎಂದು ಬೆಸ್ಕಾಂ ಚಿತ್ರದುರ್ಗ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

### ವಿವಿಧ ಯೋಜನೆ ಸೌಲಭ್ಯ ಪಡೆಯಲು ಫಲಾನುಭವಿಗಳಿಂದ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿಗೆ ಡಾ. ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ, ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ ಮತ್ತು ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮಗಳ ವತಿಯಿಂದ ವಿವಿಧ ಯೋಜನೆಗಳಿಗೆ ಅರ್ಹ ಫಲಾನುಭವಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಸ್ವಯಂ ಉದ್ಯೋಗ ಯೋಜನೆ, ಐ.ಎಸ್.ಬಿ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಎಂ.ಸಿ.ಎಫ್ ಪ್ರೇರಣಾ ಯೋಜನೆ, ಗಂಗಾ ಕಲ್ಯಾಣ ಯೋಜನೆ ಮತ್ತು ಭೂ ಒಡೆತನ ಯೋಜನೆಗಳಡಿ ಸೌಲಭ್ಯ ಒದಗಿಸಲಾಗುತ್ತದೆ. ನಿಗಮಗಳ ವ್ಯಾಪ್ತಿಗೆ ಒಳಪಡುವ ಜನಾಂಗದ ಫಲಾನುಭವಿಗಳು ಗ್ರಾಮ ಒನ್, ಕರ್ನಾಟಕ ಒನ್ ಹಾಗೂ ಸೇವಾ ಕೇಂದ್ರಗಳಲ್ಲಿ ವೆಬ್‌ಸೈಟ್ https://sevasindhu.karnaqaka.gov.in ಮೂಲಕ ಅರ್ಜಿ ಸಲ್ಲಿಸಬೇಕು.

# ಕನಿಷ್ಠ ವೇತನ ಹಾಗೂ ಬಾಲಕಾರ್ಮಿಕ ಕಾಯ್ದೆ ಬಗ್ಗೆ ಜಾಗೃತಿ ಮೂಡಿಸಿ: ಸಂತೋಷ್ ಲಾಡ್

» ಚಿತ್ರದುರ್ಗ

ಚಿತ್ರದುರ್ಗ ಹಾಗೂ ದಾವಣಗೆರೆ ವ್ಯಾಪ್ತಿಯಲ್ಲಿ ಪ್ರಸಕ್ತ ಸಾಲಿನಲ್ಲಿ ಕನಿಷ್ಠ ವೇತನ ಕಾಯ್ದೆ ಅಡಿ ಉಲ್ಲಂಘನೆಯ ಕೇವಲ ನಾಲ್ಕು ಪ್ರಕರಣಗಳು ದಾಖಲಾಗಿವೆ. ಇದು ಅಧಿಕಾರಿಗಳ ನಿರ್ಲಿಪ್ತ ಕಾರ್ಯವೈಖರಿಗೆ ಹಿಡಿದ ಕನ್ನಡಿಯಾಗಿದೆ. ಕನಿಷ್ಠ ವೇತನ ಹಾಗೂ ಬಾಲಕಾರ್ಮಿಕ ಕಾಯ್ದೆ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಹೆಚ್ಚು ಹೆಚ್ಚು ಕಾರ್ಯಕ್ರಮಗಳನ್ನು ಆಯೋಜಿಸುವಂತೆ ಕಾರ್ಮಿಕ ಇಲಾಖೆ ಸಚಿವ ಸಂತೋಷ್ ಎಸ್ ಲಾಡ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶುಕ್ರವಾರ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಕಾರ್ಮಿಕ ಇಲಾಖೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಜ್ಯದ ಕಾರ್ಮಿಕರ ಕಲ್ಯಾಣ ಹಾಗೂ ಹಿತಾಸಕ್ತಿ ಕಾಪಾಡುವ ಹೊಣೆ ಕಾರ್ಮಿಕ ಇಲಾಖೆ ಹೊತ್ತಿದೆ. ಇಲಾಖೆಯಲ್ಲಿ ಬದಲಾವಣೆ ತಂದು, ಶಿಸ್ತು ಮೂಡಿಸಲು ಪ್ರಯತ್ನಿಸಲಾಗುತ್ತದೆ. ಅಧಿಕಾರಿಗಳು ಯಾರಿಗೂ ಭಯಪಡದೆ ಕಾರ್ಮಿಕ ಕಾನೂನುಗಳನ್ನು ಜಾರಿ ಮಾಡಲು ಪ್ರಯತ್ನಿಸಬೇಕು. ಬಡ ಕೂಲಿ ಕಾರ್ಮಿಕರಿಗೆ ಕನಿಷ್ಠ ವೇತನ ದೊರೆಯುವಂತೆ ನೋಡಿಕೊಳ್ಳಬೇಕು. ಜನರಿಗೆ ನ್ಯಾಯ ದೊರಕಿಸಿಕೊಡುವ ಮೂಲಕ ಕಾರ್ಮಿಕ ಇಲಾಖೆಯ ಬಗ್ಗೆ ಭರವಸೆ ಮೂಡಿಸುವ ಕೆಲಸ ಮಾಡಬೇಕು. ಕಾರ್ಮಿಕ ನಿರೀಕ್ಷಕರು ಹಾಗೂ ಅಧಿಕಾರಿಗಳು ಕಚೇರಿಗೆ ಸೀಮಿತವಾಗದೆ ಕಾರ್ಖಾನೆಗಳಿಗೆ ಹಾಗೂ ಕಾರ್ಯ ಕ್ಷೇತ್ರಗಳಿಗೆ ತೆರಳಿ ಪರಿಶೀಲನೆ ನಡೆಸಬೇಕು. ಮಾಲಿಕರು ಕಾರ್ಮಿಕರಿಗೆ ಕನಿಷ್ಠ ವೇತನ ಪಾವತಿಸುತ್ತಿದ್ದಾರೆ ಎನ್ನುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದರು.

**ಸಹಾಯವಾಣಿ ಸ್ಥಾಪನೆಗೆ ಸೂಚನೆ:** ಕನಿಷ್ಠ ವೇತನ ಕಾಯ್ದೆಯ ಬಗ್ಗೆ ಕಾರ್ಮಿಕರಿಗೆ ಮಾಹಿತಿ ಇಲ್ಲ. ಮಾಹಿತಿ ಇದ್ದವರಿಗೆ ಯಾರಿಗೆ ದೂರು ನೀಡಬೇಕು ಎಂಬುದರ ಬಗ್ಗೆ ಗೊಂದಲವಿರುತ್ತದೆ. ಈ ಹಿನ್ನೆಲೆಯಲ್ಲಿ ಕಾರ್ಮಿಕರಿಗೆ ಅನುಕೂಲವಾಗುವಂತೆ ಪ್ರತ್ಯೇಕ ಸಹಾಯವಾಣಿಯನ್ನು ಆರಂಭಿಸಬೇಕು. ಈವರೆಗೂ ಕಾರ್ಮಿಕ ಇಲಾಖೆ ಆರಂಭಿಸಿರುವ ಸಹಾಯವಾಣಿಗಳ ಕುರಿತು ಮಾಧ್ಯಮಗಳ ಮೂಲಕ ಸಾರ್ವಜನಿಕರಲ್ಲಿ ಹೆಚ್ಚು ಪ್ರಚಾರ



ಮಾಡಬೇಕು ಎಂದು ಸಚಿವ ಸಂತೋಷ್ ಲಾಡ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಾರ್ಮಿಕ ಇಲಾಖೆಯಿಂದ ಈಗಾಗಲೇ ಸಾರ್ವಜನಿಕರ ಅನುಕೂಲಕ್ಕಾಗಿ 24*7 ಕಾರ್ಯ ನಿರ್ವಹಿಸುವ ಸಹಾಯವಾಣಿ ಸಂಖ್ಯೆ 155214 ಕಾರ್ಯನಿರ್ವಹಿಸುತ್ತಿದೆ. ಇದರ ಜೊತೆಯಲ್ಲಿ ಕಾರ್ಮಿಕರು ಮೊಬೈಲ್ ಸಂಖ್ಯೆ +91 9333333684 ವಾಟ್ಸಪ್ ಹಾಗೂ ಟೆಲಿಗ್ರಾಂ ಮೂಲಕ ದೂರು ಸಲ್ಲಿಸಬಹುದು ಎಂದು ಅಧಿಕಾರಿಗಳು ಸಭೆಯಲ್ಲಿ ಮಾಹಿತಿ ನೀಡಿದರು.

**ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ನೊಂದಣಿ ಕಡ್ಡಾಯ:** ಕರ್ನಾಟಕ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆ ಅನುಸಾರ ಎಲ್ಲಾ ರೀತಿಯ ಸಣ್ಣಪುಟ್ಟ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು ಕಾರ್ಮಿಕ ಇಲಾಖೆಯಲ್ಲಿ ನೊಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿದೆ ಎಂದು ಕಾರ್ಮಿಕ ಸಚಿವ ಸಂತೋಷ್ ಎಸ್ ಲಾರ್ಡ್ ಹೇಳಿದರು.

ಚಿತ್ರದುರ್ಗ ಜಿಲ್ಲೆಯಲ್ಲಿ ಇದುವರೆಗೂ ವಾಣಿಜ್ಯ ಬಳಕೆಗಾಗಿ 23,597 ವಿದ್ಯುತ್ ಪರವಾನಿಗೆ ನೀಡಲಾಗಿದೆ. ಪ್ರತಿ ಮಾಹೆ 400 ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳನ್ನು ನೊಂದಣಿ ಮಾಡಲು ಗುರಿ ನೀಡಲಾಗಿದೆ. ಜಿಲ್ಲೆಯಲ್ಲಿ ಅಕ್ಟೋಬರ್ ತಿಂಗಳಿನಲ್ಲಿ ಕೇವಲ 286 ನೊಂದಣಿ ಮಾಡಲಾಗಿದೆ. ಡಾಟಾ ಎಂಟ್ರಿ ಆಪರೇಟರ್ ನೊಂದಣಿ ಮಾಡುವಲ್ಲಿ ನಿರ್ಲಕ್ಷ ತೋರಿದರೆ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ನೊಂದಣಿ ಕಾರ್ಯಕ್ಕೆ ಬೆಸ್ಕಾಂ ಮೀಟರ್ ರೀಡರ್‌ಗಳ ಸಹಯೋಗ ಪಡೆದುಕೊಳ್ಳುವುದು ಸೂಕ್ತವಾಗಿದೆ ಎಂದು ಕಾರ್ಮಿಕ ಇಲಾಖೆಯ ಅಧಿಕಾರಿಗಳು ನೀಡಿದ ಸಲಹೆಗೆ ಸಹಮತಿ ವ್ಯಕ್ತಪಡಿಸಿದ ಸಚಿವರು, ಕೂಡಲೆ ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಕಾರ್ಮಿಕ ಆಯುಕ್ತರಿಗೆ ಸೂಚನೆ ನೀಡಿದರು.

ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಮಾಲೀಕರಿಗೆ ಕಾಯ್ದೆಯ ಬಗ್ಗೆ ಮನವರಿಕೆ ಮಾಡಿಕೊಡಬೇಕು. ಇಲ್ಲವಾದಲ್ಲಿ ಕಾರ್ಮಿಕ ಇಲಾಖೆಯಿಂದ ನಗರ ಸಭೆ ಹಾಗೂ ಇತರೆ ಸ್ಥಳೀಯ ಸಂಸ್ಥೆಗಳಿಗೆ ಸಂಬಂದಪಟ್ಟ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಪರವಾನಿಗೆಯನ್ನು ರದ್ದುಪಡಿಸುವಂತೆ ಶಿಫಾರಸ್ಸು ಮಾಡಲಾಗುವುದು ತಿಳಿಯಪಡಿಸಿ ಎಂದರು.

ಬೆಸ್ಕಾಂ ಸೇರಿದಂತೆ ಎಲ್ಲಾ ವಿದ್ಯುತ್ ಸರಬರಾಜು ಕಂಪನಿಗಳ ಮೀಟರ್ ರೀಡರ್‌ಗಳಿಗೆ ಪ್ರೋತ್ಸಾಹ ಧನ ನೀಡುವುದರೊಂದಿಗೆ, ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ನೊಂದಣಿ ಕಾರ್ಯಕ್ಕೆ ಬಳಸಿಕೊಳ್ಳುವ ಕುರಿತು ಕ್ರಿಯಾ ಯೋಜನೆಯನ್ನು ಸಿದ್ಧಪಡಿಸುವಂತೆ ಸಚಿವ ಸಂತೋಷ್ ಲಾಡ್ ಕಾರ್ಮಿಕ ಇಲಾಖೆ ಆಯುಕ್ತ ಡಾ.ಗೋಪಾಲಕೃಷ್ಣ ಅವರಿಗೆ ಸಭೆಯಲ್ಲಿ ಸೂಚನೆ ನೀಡಿದರು.

**ಉದ್ಯೋಗ ಮೇಳ ಆಯೋಜನೆ:** ಇಲಾಖೆಯ ಆಕಾಶದೀಪ ಯೋಜನೆ ಅಡಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ಕಾರ್ಮಿಕರ ಪಿಎಫ್ ಖಾತೆಗೆ ಹಣ ಜಮೆ ಮಾಡಲಾಗುವುದು. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ಅಭ್ಯರ್ಥಿಗಳನ್ನು ಕಾರ್ಖಾನೆಗಳಲ್ಲಿ ಅಪ್ರೆಂಟಿಸ್ ತರಬೇತಿಗೆ ಸೇರಿಸಿಕೊಂಡರೆ ಇಲಾಖೆಯಿಂದ ಅಂತಹ ಅಭ್ಯರ್ಥಿಗಳಿಗೆ ಕನಿಷ್ಠ ವೇತನ ಪಾವತಿ ಮಾಡಲಾಗುವುದು. ಈ ಕುರಿತು ಸಂಸ್ಥೆಗಳು ಮಾಲೀಕರಿಗೆ ತಿಳುವಳಿಕೆ ನೀಡಬೇಕು. ಯೋಜನೆಯಡಿ ಹೆಚ್ಚಿನ ಫಲಾನುಭವಿಗಳಿಗೆ ಸಹಾಯ ನೀಡಲು ಗುರಿ ನಿಗದಿಪಡಿಸಿಕೊಂಡು ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಿಗೆ ಕಾರ್ಮಿಕ ಇಲಾಖೆಯಿಂದ ಪತ್ರ ಬರೆಯಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಅಭ್ಯರ್ಥಿಗಳಿಗೆ ಹೆಚ್ಚಿನ ಉದ್ಯೋಗ ಕಲ್ಪಿಸುವ ನಿಟ್ಟಿನಲ್ಲಿ ಉದ್ಯೋಗ ಮೇಳವನ್ನು ಆಯೋಜಿಸುವಂತೆ ಸಚಿವ ಸಂತೋಷ್ ಲಾಡ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಚಿತ್ರದುರ್ಗ ಜಿಲ್ಲೆಯಲ್ಲಿ ಆಶಾದೀಪ ಯೋಜನೆ ಅಡಿ ಒಟ್ಟು ರೂ. 26,38,579 ಬಿಡುಗಡೆಯಾಗಿದೆ. 593 ಕಾರ್ಮಿಕರಿಗೆ ರೂ.23,61,466 ಗಳನ್ನು ಪಿಎಫ್ ಖಾತೆಗೆ ತುಂಬಲಾಗಿದೆ. ಇದರಲ್ಲಿ ಪರಿಶಿಷ್ಟ ಜಾತಿಯ 432 ಹಾಗೂ ಪರಿಶಿಷ್ಟ ವರ್ಗದ 161 ಫಲಾನುಭವಿಗಳು ಇದ್ದಾರೆ ಎಂದು ಕಲಬುರ್ಗಿ ವಿಭಾಗದ ಉಪ ಆಯುಕ್ತ ವೆಂಕಟೇಶ್ ಶಿಂದಿಹಟ್ಟಿ ಮಾಹಿತಿ ನೀಡಿದರು.

**ಅರ್ಹ ಫಲಾನುಭವಿಗಳನ್ನು ಗುರುತಿಸಿ ಧನ ಸಹಾಯ ನೀಡಿ:** ಕಟ್ಟಡ ಕಾರ್ಮಿಕ ಕಲ್ಯಾಣ ಮಂಡಳಿ ಯೋಜನೆಗಳ ಲಾಭ ಪಡೆಯಲು ಸಲ್ಲಿಸಿದ ಅರ್ಜಿಗಳನ್ನು ಅಧಿಕಾರಿಗಳು ಸೂಕ್ತವಾಗಿ ಪರಿಶೀಲನೆ ನಡೆಸಬೇಕು. ಅರ್ಹ ಫಲಾನುಭವಿಗಳನ್ನು ಗುರುತಿಸಿ ಧನ ಸಹಾಯ ನೀಡಬೇಕು. ಬೇರೆ ಜಿಲ್ಲೆಗಳಲ್ಲಿ ಕಟ್ಟಡ ಕಾರ್ಮಿಕರ ಹೆಸರಿನಲ್ಲಿ ಬೇರೆಯವರು ಧನಸಹಾಯ ಪಡೆದ ಉದಾಹರಣೆಗಳಿವೆ. ಇಂತಹ ಸಂಗತಿಗಳಿಗೆ ಅವಕಾಶ ಮಾಡಿಕೊಡಬಾರದು. ಸುಳ್ಳು ಹಾಗೂ ಮೋಸದಿಂದ ಧನ ಸಹಾಯ ಮಂಜೂರಾತಿ ಮಾಡಿರುವುದು ಕಂಡು ಬಂದರೆ ಅಂತಹ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುವುದು. ಶೀಘ್ರವೇ ಕಾರ್ಮಿಕ ಕಲ್ಯಾಣ ಮಂಡಳಿಯಿಂದ ನೀಡಲಾದ ಧನಸಹಾಯಗಳ ಕುರಿತು ಆಡಿಟ್ ಮಾಡಿಸಲಾಗುವುದು ಎಂದು ಸಚಿವ ಸಂತೋಷ್ ಲಾಡ್ ತಿಳಿಸಿದರು.

ಚಿತ್ರದುರ್ಗ ಜಿಲ್ಲೆಯಲ್ಲಿ 1,49,436 ಕಟ್ಟಡ ಕಾರ್ಮಿಕರು ನೊಂದಣಿಯಾಗಿದ್ದಾರೆ. ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸುಂಕ ಕಾಯ್ದೆಯಡಿ 2021 ರಿಂದ 2023ರ ವರೆಗೆ 41.22 ಕೋಟಿ ರೂ. ಸುಂಕ ವಸೂಲು ಮಾಡಲಾಗಿದೆ. ಕಳೆದ ಮೂರು ವರ್ಷದಲ್ಲಿ 18,626 ಕಟ್ಟಡ ಕಾರ್ಮಿಕರಿಗೆ 27.33 ಕೋಟಿ ರೂ. ಗಳ ಸೌಲಭ್ಯ ವಿತರಣೆ ಮಾಡಲಾಗಿದೆ. ಪ್ರಸಕ್ತ ಸಾಲಿನಲ್ಲಿ ಶೈಕ್ಷಣಿಕ, ಮದುವೆ ಧನಸಹಾಯ, ವೈದ್ಯಕೀಯ, ಹೆರಿಗೆ ತಾಯಿ ಮಗು ಸಹಾಯ ಹಸ್ತ ಯೋಜನೆ ಅಡಿ ಧನ ಸಹಾಯಕ್ಕಾಗಿ ಒಟ್ಟು 2049 ಅರ್ಜಿಗಳನ್ನು ಸ್ವೀಕರಿಸಲಾಗಿದೆ. 1,726 ಅರ್ಜಿಗಳಿಗೆ ಮಂಜೂರಾತಿ ನೀಡಲಾಗಿದೆ. 179 ಅರ್ಜಿಗಳನ್ನು ತಿರಸ್ಕರಿಸಲಾಗಿದೆ. 54 ಅರ್ಜಿಗಳು ಬಾಕಿ ಉಳಿದಿವೆ.

ಜಿಲ್ಲೆಯಲ್ಲಿ 2,53,347 ಫಲಾನುಭವಿಗಳು ಈ-ಶ್ರಮ ಅಡಿ ನೋಂದಣಿ ಮಾಡಿಕೊಂಡಿದ್ದಾರೆ.ಚಿತ್ರದುರ್ಗ ಜಿಲ್ಲೆಯಲ್ಲಿ ಏಪ್ರಿಲ್ 2023 ರಿಂದ ಅಕ್ಟೋಬರ್ 2023 ರವರೆಗೆ ಅಂತಿಮ ಸಂಸ್ಕಾರ ಮತ್ತು ಅನುಗ್ರಹ ರಾಶಿ ಧನ ಸಹಾಯ ಕೋರಿ 290, ಅಪಘಾತ ಪರಿಹಾರ ಕೋರಿ 10, ಪಿಂಚಣಿ ಕೋರಿ 96, ದುರ್ಬಲತೆಯ ಪಿಂಚಣಿ ಕೋರಿ 21 ಅರ್ಜಿಗಳು ಸೇರಿ ಒಟ್ಟು 417 ಅರ್ಜಿಗಳನ್ನು ಸ್ವೀಕರಿಸಲಾಗಿದೆ. ಇದರಲ್ಲಿ 305 ಅರ್ಜಿಗಳಿಗೆ ಮಂಜೂರಾತಿ ನೀಡಲಾಗಿದೆ. 105 ಅರ್ಜಿಗಳನ್ನು ತಿರಸ್ಕರಿಸಲಾಗಿದೆ ಎಂದು ಕಲಬುರ್ಗಿ ವಿಭಾಗದ ಉಪ ಆಯುಕ್ತ ವೆಂಕಟೇಶ್ ಶಿಂದಿಹಟ್ಟಿ ತಿಳಿಸಿದರು.

ಜಿಲ್ಲೆಯಲ್ಲಿ ಒಟ್ಟು 223 ಕಾರ್ಖಾನೆಗಳಿದ್ದು, ಈ ಪೈಕಿ 11 ಅಪಾಯಕಾರಿ ವಲಯದ ಕಾರ್ಖಾನೆಗಳಿವೆ,ಒಟ್ಟು 11090 ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ, ಕಾರ್ಖಾನೆ ಮತ್ತು ಬಾಯ್ಲರ್ ವಿಭಾಗದಿಂದ ಈ ವರ್ಷ 49 ತಪಾಸಣೆಗಳನ್ನು ಕೈಗೊಳ್ಳಲಾಗಿದೆ ಎಂದು ಇಲಾಖೆಯ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಕಾರ್ಮಿಕ ಸಚಿವರು, ಕಾರ್ಖಾನೆಗಳಲ್ಲಿನ ಕಾರ್ಮಿಕರಿಗೆ ಕನಿಷ್ಠ ವೇತನ ಕಾಯ್ದೆ ಹಾಗೂ ಬಾಲ ಕಾರ್ಮಿಕ ನಿಷೇಧ ಕಾಯ್ದೆ ಕುರಿತಂತೆ ಜಾಗೃತಿ ಮೂಡಿಸಬೇಕು, ಜೊತೆಗೆ ಕಾರ್ಖಾನೆ ಕಾರ್ಮಿಕರುಗಳಿಗೆ ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಲಾಗುತ್ತಿದೆಯೇ, ಎಂಬುದರ ಬಗ್ಗೆ ವರದಿಯನ್ನು ಪಡೆಯಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಕಾರ್ಮಿಕ ಇಲಾಖೆ ಆಯುಕ್ತ ಗೋಪಾಲಕೃಷ್ಣ, ಕಟ್ಟಡ ಕಾರ್ಮಿಕ ಕಲ್ಯಾಣ ಮಂಡಳಿಯ ಮುಖ್ಯ ಕಾರ್ಯನಿವಾಹಕ ಅಧಿಕಾರಿ ಭಾರತಿ, ಕಾರ್ಮಿಕ ಇಲಾಖೆ ವಲಯ ಹೆಚ್ಚುವರಿ ಆಯುಕ್ತ ಮಂಜುನಾಥ್, ಕಾರ್ಖಾನೆ ಮತ್ತು ಬಾಯ್ಲರ್ ವಿಭಾಗದ ನಿರ್ದೇಶಕ ಶ್ರೀನಿವಾಸ್, ಜಿಲ್ಲಾ ಕಾರ್ಮಿಕ ಅಧಿಕಾರಿ ಇಬ್ರಾಹಿಂ ಸೇರಿದಂತೆ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

## ನ್ಯಾಯಬೆಲೆ ಅಂಗಡಿ ಮಾಲೀಕರು ಮತ್ತೊಮ್ಮೆ ಸಂಕಷ್ಟದಲ್ಲಿ
# ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಸಿಎಂಗೆ ಮನವಿ

» ಚಳ್ಳಕೆರೆ

ಗ್ರಾಮೀಣ ಹಾಗೂ ನಗರ ಭಾಗದಲ್ಲಿ ಕಳೆದ ಹಲವಾರು ದಶಕಗಳಿಂದ ಕಾರ್ಯನಿರ್ವಹಿಸುತ್ತಿರುವ ನ್ಯಾಯಬೆಲೆ ಅಂಗಡಿ ಮಾಲೀಕರ ಬಹುವರ್ಷಗಳ ಬೇಡಿಕೆಯನ್ನು ಈಡೇರಿಸಬೇಕೆಂದು ಒತ್ತಾಯಿಸಿ ತಹಶೀಲ್ದಾರ್ ಮೂಲಕ ಸರ್ಕಾರಕ್ಕೆ ನ್ಯಾಯಬೆಲೆ ಅಂಗಡಿ ಮಾಲೀಕರ ಸಂಘ ಮನವಿ ನೀಡಿದೆ.

ತಾಲ್ಲೂಕು ನ್ಯಾಯಬೆಲೆ ಅಂಗಡಿ ಮಾಲೀಕರ ಸಂಘದ ಅಧ್ಯಕ್ಷ ಬೊಪ್ಪಣ್ಣ ನೇತೃತ್ವದಲ್ಲಿ ಸುಮಾರು 100ಕ್ಕೂ ಹೆಚ್ಚು ನ್ಯಾಯಬೆಲೆ ಅಂಗಡಿ ಮಾಲೀಕರು ಮನವಿ ನೀಡಿದ್ದು, ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರ ಮೇಲೆ ಒತ್ತಡ ಹೇರಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಸಂಘದ ತಾಲ್ಲೂಕು ಪ್ರಧಾನ ಕಾರ್ಯದರ್ಶಿ



ಚನ್ನಿಗರಾಮಯ್ಯ, ಪಡಿತರ ವಿತರಣೆಯಲ್ಲಿ ಸರ್ಕಾರ ಹಲವಾರು ಬದಲಾವಣೆಯನ್ನು ಜಾರಿಗೆ ತಂದಿರುವುದು ಸಂತಸವಾದರೂ, ನ್ಯಾಯಬೆಲೆ ಅಂಗಡಿ ಮಾಲೀಕರಿಗೆ ಮಾತ್ರ ಹೆಚ್ಚು ಅನ್ಯಾಯವಾಗುತ್ತಿದ್ದು, ಸರ್ಕಾರ ಬದಲಾದ ವಿತರಣಾ ನೀತಿಯಿಂದ ನ್ಯಾಯಬೆಲೆ ಅಂಗಡಿ ಮಾಲೀಕರು ತೀರ್ವಸಂಕಷ್ಟಕ್ಕೆ ಈಡಾಗಿದ್ದಾರೆ. ಸರ್ಕಾರ ನೀಡುವ ಅತಿ ಕಡಿಕೆದರದ ಕಮಿಷನ್ ಸಹ ಪ್ರತಿತಿಂಗಳು ನ್ಯಾಯಬೆಲೆ ಅಂಗಡಿ ಮಾಲೀಕರಿಗೆ ದಕ್ಕುತ್ತಿಲ್ಲ, ಪಡಿತರ ವಿತರಣೆಯಲ್ಲಿ ಅಕ್ಕಿ ಪ್ರಮಾಣವನ್ನು ಕಡಿತಗೊಳಿಸಲಾಗಿದೆ. ಇದರಿಂದ ನ್ಯಾಯಬೆಲೆ ಅಂಗಡಿ ಮಾಲೀಕರಿಗೆ ಲಾಭಕ್ಕಿಂತ ನಷ್ಟವೇ ಹೆಚ್ಚು. ಪಡಿತರ ವಿತರಣೆಯನ್ನು ತಾಲ್ಲೂಕಿನಾದ್ಯಂತ ಪ್ರಾಮಾಣಿಕವಾಗಿ ನ್ಯಾಯಬೆಲೆ ಅಂಗಡಿ ಮಾಲೀಕರು ಮಾಡುತ್ತಿದ್ದರೂ ಅವರಿಗೆ ನ್ಯಾಯುತವಾಗಿ ದೊರೆಯಬೇಕಿದ್ದ ಯಾವುದೇ ಸೌಲಭ್ಯ ಸಿಗುತ್ತಿಲ್ಲವೆಂದು ಆರೋಪಿಸಿದರು.

ನ. 7ರಂದು ಬೆಂಗಳೂರಿನಲ್ಲಿ ರಾಜ್ಯಮಟ್ಟದ ನ್ಯಾಯಬೆಲೆ ಅಂಗಡಿ ಮಾಲೀಕರ ಸಭೆ ನಡೆಯಲಿದ್ದು, ಸಭೆಯಲ್ಲಿ ನಡೆಯುವ ನಿರ್ಣಯಕ್ಕೆ ನಾವು ಬದ್ದರಾಗಿದ್ದು, ಯಾವುದೇ ಕಾರಣಕ್ಕೂ ನ್ಯಾಯಬೆಲೆ ಅಂಗಡಿಗಳಿಗೆ ಪಡಿತರವನ್ನು ದಾಸ್ತಾನು ಮಾಡಲು ಬಿಡುವುದಿಲ್ಲ.

## ಹೊಟ್ಟೆಪ್ಪನಹಳ್ಳಿ ಮೇಗಳಗೊಲ್ಲರಹಟ್ಟಿಯಲ್ಲಿ ಗ್ರಾಮ ದೇವರುಗಳ ಗಂಗಾಪೂಜೆ



**ಚಳ್ಳಕೆರೆ:** ತಾಲ್ಲೂಕಿನ ನಗರಂಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೊಟ್ಟೆಪ್ಪನಹಳ್ಳಿ ಮೇಗಳಗೊಲ್ಲರಹಟ್ಟಿಯಲ್ಲಿ ದಸರಾ ಹಬ್ಬದ ಹಿನ್ನೆಲೆಯಲ್ಲಿ ಗ್ರಾಮ ದೇವರಾದ ಶ್ರೀಗೊಲ್ಲಾಳಮ್ಮ, ಜುಂಜೇಶ್ವರ ದೇವರುಗಳ ಗಂಗಾಪೂಜೆ ಕಾರ್ಯ ಸಂಜೆ ಅದ್ದೂರಿಯಾಗಿ ನಡೆಯಿತು. ಗ್ರಾಮದ ಮುಖಂಡರಾದ ಪೂಜಾರಿ ಘಟ್ಟಪ್ಪ, ಕಾಟಪ್ಪ, ಸಿದ್ದಪ್ಪ, ಅಂಜಿನಪ್ಪ, ರಘು, ಶ್ರೀನಿವಾಸ್, ಗಜೇಂದ್ರ, ವೀರಭದ್ರಪ್ಪ, ಮಹಲಿಂಗಪ್ಪ ಸೇರಿದಂತೆ ನೂರಾರು ಭಕ್ತರು ಗೊಲ್ಲಾಳಮ್ಮ, ಜುಂಜೇಶ್ವರ ದೇವರನ್ನು ಮಂಗಳವಾದ್ಯದ ಮೂಲಕ ಗಂಗಾಪೂಜೆಗೆ ಗೋಪನಹಳ್ಳಿ ಗ್ರಾಮದ ಗರಣಿ ಹಳ್ಳಕ್ಕೆ ಕರೆತರಲಾಯಿತು.

## ಪ್ರಮುಖ ಸುದ್ದಿ

# ಸಿದ್ದರಾಮಯ್ಯ 5 ವರ್ಷ ಸಿಎಂ: ಸಚಿವ ಸಂತೋಷ ಲಾಡ್

» ಚಿತ್ರದುರ್ಗ

ರಾಜ್ಯದ ಮುಖ್ಯಮಂತ್ರಿಗಳ ಬದಲಾವಣೆಯ ವಿಚಾರ ಪಕ್ಷದ ಹೈಕಮಾಂಡಿಗೆ ಬಿಟ್ಟದ್ದು, ಇದರಲ್ಲಿ ಯಾವ ಮಂತ್ರಿಯಾಗಲಿ, ಶಾಸಕರಾಗಲಿ ಮಾತು ನಡೆಯುವುದಿಲ್ಲ ಸಿದ್ದರಾಮಯ್ಯರವರು ಐದು ವರ್ಷ ಸಿಎಂ ಆಗಿರುವುದಕ್ಕೆ ನನ್ನ ಸಮ್ಮತಿ ಇದೆ ಎಂದು ಕಾರ್ಮಿಕ ಸಚಿವರಾದ ಸಂತೋಷ ಲಾಡ್ ತಿಳಿಸಿದರು.

ಚಿತ್ರದುರ್ಗ ನಗರದ ಪ್ರವಾಸಿ ಮಂದಿರದಲ್ಲಿ ಭೇಟಿಯಾದ ಸುದ್ದಿಗಾರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ ಬಹುಮತದೊಂದಿಗೆ ಅಧಿಕಾರಕ್ಕೆ ಬಂದಿದೆ. ಈಗಾಗಲೇ ಸಚಿವ ಸಂಪುಟವೂ ಸಹಾ ನಿರ್ಮಾಣವಾಗಿದೆ. ಈಗ ಕೆಲವರು ಮುಂದಿನ ಎರಡುವರೆ ವರ್ಷದಲ್ಲಿ ಸಚಿವ ಸಂಪುಟ ಬದಲಾವಣೆಯಾಗುತ್ತದೆ ಎನ್ನುತ್ತಿದ್ದಾರೆ ಇದರ ಬಗ್ಗೆ ಪಕ್ಷದ ಹೈಕಮಾಂಡ್ ನಿರ್ಣಯ ಮಾಡಲಿದೆ. ಇಲ್ಲಿ ನಾವು ಹೇಳಿದ ಮಾತ್ರಕ್ಕೆ ಸಚಿವ ಸಂಪುಟ ಬದಲಾವಣೆಯಾಗುವುದಿಲ್ಲ ಶಾಸಕರ, ಹೈಕಮಾಂಡ್ನ ತೀರ್ಮಾನ ಮುಖ್ಯವಾಗಿದೆ ಎಂದು ತಿಳಿಸಿದರು.



ಮುಂದಿನ 5 ವರ್ಷಗಳ ನಾನೇ ಸಿಎಂ ಎಂದು ಹೇಳಿರುವ ಸಿದ್ದರಾಮಯ್ಯ ಅವರಿಗೆ ನನ್ನ ಸಹಮತ ಇದೆ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ರಚನೆ ಆದ ದಿನದಿಂದ ಎರಡೂವರೆ ವರ್ಷ ಸಿಎಂ ಸ್ಥಾನ ಹಂಚಿಕೆ ಆಗಿದೆಯಾ ಎಂಬ ಪ್ರಶ್ನೆ ಬಹಳಷ್ಟು ಜನರು ಕೇಳುತ್ತಿದ್ದರು ಅದಕ್ಕೆಲ್ಲಾ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಾನೇ 5 ವರ್ಷ ಸಿಎಂ ಎಂದು ಹೇಳುವ ಮೂಲಕ ಎಲ್ಲಾ ಚರ್ಚೆ ಹಾಗೂ ಗೊಂದಲಗಳಿಗೆ ತೆರೆ ಎಳೆದಿದ್ದಾರೆ. ಈ ಬಗ್ಗೆ ಯಾರು ಕೂಡ ಮತ್ತೇ ಮಾತನಾಡಬಾರದು. ಪಕ್ಷದ ಹೈ ಕಮಾಂಡ್ ಹಾಗೂ ಶಾಸಕರು ಮುಂದಿನ ನಡೆ ಬಗ್ಗೆ ತೀರ್ಮಾನ ಮಾಡಲಿದ್ದಾರೆ ಎಂದು ತಿಳಿಸಿದರು.

ಸಚಿವ ಸತೀಶ್ ಜಾರಕೀಹೊಳಿ ಹಾಗೂ ಡಿ ಕೆ ಶಿವಕುಮಾರ್ ಗುಂಪುಗಳನ್ನು ಕಟ್ಟಿಕೊಂಡು ಶಾಸಕರ ಬೆಂಬಲ ಇದೆ. ನಾವು ಕೂಡ ಸಿಎಂ ಆಕಾಂಕ್ಷಿ ಎಂದಿರುವ ಕುರಿತು ನನಗೆ ತಿಳಿದಿಲ್ಲ ಎಂದಷ್ಟೇ ಹೇಳಿದ ಅವರು, ಎಲ್ಲರೂ ಕೂಡ ನಮ್ಮ ಪಕ್ಷದವರೇ ಆಗಿದ್ದು, ನಮ್ಮಲ್ಲಿ ಯಾವುದೇ ಭಿನ್ನಾಭಿಪ್ರಾಯ, ಗೊಂದಲಗಳು ಇಲ್ಲ. ಅಭಿಪ್ರಾಯಗಳು ಇವೆ ಅಷ್ಟೇ ಎಂದರು.

ಕಾಂಗ್ರೆಸ್ ಪಕ್ಷದ 60 ಜನ ಶಾಸಕರ ಬೆಂಬಲ ನಮಗಿದೆ ಎಂದು ಅಪರೇಷನ್ ಕಮಲ ಮಾಡಲು ಹೊರಟಿರುವ ಬಿಜೆಪಿ ಅವರು ಕುರಿತು ಮಾತನಾಡಿದ ಅವರು, ಬಿಜೆಪಿಯವರಿಗೆ ಇದೀಗ ಮಾಡಲು ಏನು ಕೆಲಸ ಇಲ್ಲ.

ಅವರ ಪಕ್ಷ ಅಧಿಕಾರದಲ್ಲಿರದೆ ಬೇರೆ ಪಕ್ಷ ಅಧಿಕಾರದಲ್ಲಿದ್ದಾಗ ಅದನ್ನು ಹೇಗೆ ಬಿಳಿಸಬೇಕು ಎಂಬುವುದನ್ನು ಚಾಳಿಯಾಗಿ ಬೆಳೆಸಿಕೊಂಡಿದ್ದು, ಸಿಬಿಐ ಇಡಿ, ಲೋಕಾಯುಕ್ತ ಎಂದು ತಮ್ಮ ಅಧಿಕಾರವನ್ನು ಬಳಸಿಕೊಂಡು ಮನಬಂದರತೆ ದಾಳಿ ಮಾಡಿಸಿ, ಆರೋಪಗಳನ್ನು ಮಾಡಿ ಮಾನಸಿಕವಾಗಿ ಕುಗ್ಗಿಸಿ ಬಿಜೆಪಿಗೆ ಕರೆದುಕೊಳ್ಳುವುದು ಅವರ ಹವ್ಯಾಸವಾಗಿದೆ. ಆರೋಪ ಹೊತ್ತ ವ್ಯಕ್ತಿ ಬಿಜೆಪಿಗೆ ಹೋದರೆ ವಾಷಿಂಗ್ ಪೌಡರ್ ನಿರ್ಮಾ ಇದ್ದ ಆಗೆ. ಅಲ್ಲಿ ಎಲ್ಲಾ ತೊಳೆದುಬಿಡುತ್ತಾರೆ ನಂತರ ಆ ವ್ಯಕ್ತಿ ಪರಿಶುದ್ದ ಆಗಿಬಿಡುತ್ತಾನೆ. ಈ ಕೆಲಸವನ್ನು ಬಿಜೆಪಿ ಕಳೆದ 9 ವರ್ಷಗಳಿಂದ ಮಾಡಿಕೊಂಡು ಬರುತ್ತಿದ್ದು, ಈಗಲೂ ಅದನ್ನೆ ಮುಂದುವರೆಸಿಕೊಂಡು ಹೋಗುತ್ತಿದ್ದಾರೆ ಎಂದು ದೂರಿದರು.

ಹೈಕಮಾಂಡ್ ನಾಯಕರು ರಾಜ್ಯಕ್ಕೆ ಬರುವುದೇ ವಸೂಲಿಗೊಸ್ಕರ ಎಂದಿರುವ ಹೆಚ್.ಡಿ.ಕುಮಾರಸ್ವಾಮಿ ಬಗ್ಗೆ ಎಲ್ಲರಿಗೂ ತಿಳಿದಿದೆ. ಈ ಮೊದಲು ಬಿಜೆಪಿ ಯವರ ಬಗ್ಗೆ ಮಾತನಾಡುತ್ತಿದ್ದ ಕುಮಾರಣ್ಣ ಇದೀಗ ಕಾಂಗ್ರೆಸ್ ಬಗ್ಗೆ ಮಾತನಾಡುತ್ತಿದ್ದಾರೆ. ಬಿಜೆಪಿ ಜೊತೆ ಹೊಂದಾಣಿಕೆ ಮಾಡಿಕೊಂಡಿರುವುದರಿಂದ ನಮ್ಮ ಬಗ್ಗೆ ಹೆಚ್ಚಾಗಿ ಮಾತನಾಡುತ್ತಿದ್ದಾರೆ. ಅದನ್ನು ನಿಲ್ಲಿಸಿ ಬರಗಾಲ, ರೈತರು, ಶಿಕ್ಷಣ ಸೇರಿದಂತೆ ರಾಜ್ಯದಲ್ಲಿ ಸಾಕಷ್ಟು ಸಮಸ್ಯೆಗಳಿವೆ. ಅವುಗಳ ಬಗ್ಗೆ ಮಾತನಾಡಬೇಕು ಎಂದು ಸಲಹೆ ನೀಡಿದರು.

ನಮ್ಮ ಇಲಾಖೆಯಲ್ಲಿ ಕಾರ್ಮಿಕರಿಗೆ ನೀಡಿದ ವಿವಿಧ ರೀತಿಯ ವಸ್ತುಗಳು ಕಳಪೆಯಾಗಿದೆ ಎಂಬ ದೂರು ಇದೆ ಇದರ ಬಗ್ಗೆ ಅಧಿಕಾರಿಗಳ ತಂಡವನ್ನು ರಚನೆ ಮಾಡಲಾಗಿದೆ ಅವರು ವರದಿ ನೀಡಿದ ನಂತರ ಮುಂದಿನ ಕ್ರಮವನ್ನು ತೆಗೆದುಕೊಳ್ಳಲಾಗುವುದು ಅಲ್ಲದೆ ಈ ವಸ್ತುಗಳನ್ನು ಖರೀದಿ ಮಾಡಿದ್ದು ಬಿಜೆಪಿ ಸರ್ಕಾರ ಇದ್ದಾಗ ವಿತರಣೆ ಮಾಡಿದ್ದು ಸಹಾ ಬಿಜೆಪಿ ಸರ್ಕಾರ ಇದ್ದಾಗ ಎಂದು ಸಂತೋಷ ಲಾಡ್ ತಿಳಿಸಿದರು.

## ಫಾಸ್ಟ್ ನ್ಯೂಸ್

### ಸ್ಪರ್ಧಾತ್ಮಕ ಪರೀಕ್ಷೆ: ನಿಷೇಧಾಜ್ಞೆ ಜಾರಿ

» **ಚಿತ್ರದುರ್ಗ**

ಇದೇ ನವೆಂಬರ್ 4 ಮತ್ತು 5ರಂದು ಕರ್ನಾಟಕ ಲೋಕಸೇವಾ ಆಯೋಗದ ವತಿಯಿಂದ ವಿವಿಧ ಇಲಾಖೆಗಳಲ್ಲಿನ ಗ್ರೂಪ್–ಸಿ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಆದೇಶಿದ್ದಾರೆ. ಗ್ರೂಪ್ ಸಿ ಹುದ್ದೆಗಳ ಪರೀಕ್ಷೆಯು ಚಿತ್ರದುರ್ಗ ನಗರದ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ನಡೆಯುವ ದಿನದಂದು ಪರೀಕ್ಷಾ ಕೇಂದ್ರಗಳಲ್ಲಿನ ಅವ್ಯವಹಾರಗಳನ್ನು ತಡೆಗಟ್ಟಲು ಪರೀಕ್ಷಾ ಕೇಂದ್ರಗಳ 200 ಮೀಟರ್ ಸುತ್ತ ಸಿಆರ್‌ಪಿಸಿ ಕಲಂ 144ರಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಪರೀಕ್ಷಾ ಕೇಂದ್ರಗಳ ವ್ಯಾಪ್ತಿಯಲ್ಲಿ ಜೆರಾಕ್ಸ್ ಅಂಗಡಿ ಹಾಗೂ ಕಂಪ್ಯೂಟರ್, ಇಂಟರ್‌ನೆಟ್ ಕೇಂದ್ರಗಳನ್ನು ಬೆಳಿಗ್ಗೆ 9 ಗಂಟೆಯಿಂದ ಸಂಜೆ 5 ರವರೆಗೆ ಮುಚ್ಚುವಂತೆ ಮತ್ತು ಪರೀಕ್ಷಾ ಕೇಂದ್ರಗಳಿಗೆ ಅಭ್ಯರ್ಥಿಯು ಯಾವುದೇ ಕಾರಣಕ್ಕೂ ಮೊಬೈಲ್ ಫೋನ್‌ಗಳನ್ನು ತರದಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಆದೇಶಿದ್ದಾರೆ.

### ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

2023–24 ಸಾಲಿಗೆ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮಗಳಿಂದ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ನವೆಂಬರ್ 29 ಅರ್ಜಿ ಸಲ್ಲಿಸಲು ಕೊನೆ ದಿನ.

ಗಂಗಾ ಕಲ್ಯಾಣ ಯೋಜನೆ, ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಮೈಕ್ರೋ ಕ್ರೆಡಿಟ್ ಪ್ರೇರಣಾ ಯೋಜನೆ, ಭೂ ಒಡೆತನ ಯೋಜನೆ ಸೇರಿದಂತೆ ಒಟ್ಟು ನಾಲ್ಕು ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

**ಗಂಗಾಕಲ್ಯಾಣ ಯೋಜನೆ:** ಸಣ್ಣ ಮತ್ತು ಅತಿ ಸಣ್ಣ ರೈತರು ಹೊಂದಿರುವ ಖುಷ್ಕಿ, ಒಣ (1:20 ಎಕರೆಯಿಂದ5ಎಕರೆಒಳಪಟ್ಟಿರಬೇಕು)ಜಮೀನಿನಲ್ಲಿ ಕೊಳವೆ ಬಾವಿ ಕೊರೆಸಿ ನೀರಾವರಿ ಸೌಲಭ್ಯ ಕಲ್ಪಿಸಲಾಗುವುದು.ಸ್ವಯಂ ಉದ್ಯೋಗ ನೇರಸಾಲ ಯೋಜನೆ: ಅರ್ಹ ನಿರುದ್ಯೋಗಿ ಅಭ್ಯರ್ಥಿಗಳಿಂದ ಸ್ವಯಂ ಉದ್ಯೋಗ ಯೋಜನೆಯಡಿಯಲ್ಲಿ ವಿವಿಧ ಆರ್ಥಿಕ ಚಟುವಟಿಕೆಗಳನ್ನು ಕೈಗೊಳ್ಳಲು, ನೇರಸಾಲ: ಸಣ್ಣ ಆದಾಯಗಳಿಸುವ ಆರ್ಥಿಕ ಚಟುವಟಿಕೆಗಳಿಗಾಗಿ ಘಟಕ ವೆಚ್ಚ ಗರಿಷ್ಠ ರೂ.1ಲಕ್ಷ ಇದರಲ್ಲಿ 50% ಸಾಲ ಮತ್ತು 50% ಸಹಾಯಧನ. ಉದ್ಯಮಶೀಲತಾ ಅಭಿವೃದ್ಧಿ ಯೋಜನೆ: ಘಟಕ–1 ವ್ಯಾಪಾರ ಇತರೆ ಉದ್ಯಮಗಳಿಗೆ ಸಹಾಯಧನ ಗರಿಷ್ಠ ರೂ.1 ಲಕ್ಷ ಉಳಿದ ಮೊತ್ತ ಬ್ಯಾಂಕ್‌ನಿಂದ ಸಾಲ ನೀಡಲಾಗುವುದು. ಘಟಕ–2 ವ್ಯಾಪಾರ ಇತರೆ ಉದ್ಯಮಗಳಿಗೆ ಸಹಾಯಧನ ಗರಿಷ್ಠ ರೂ.2 ಲಕ್ಷ ಉಳಿದ ಮೊತ್ತ ಬ್ಯಾಂಕ್‌ನಿಂದ ಸಾಲ ನೀಡಲಾಗುವುದು.

**ಸ್ವಾವಲಂಬಿ ಸಾರಥಿ ಯೋಜನೆ:** ಸರಕು ಸಾಗಣಿಕೆ, ಟ್ಯಾಕ್ಸಿ (ಹಳದಿ ಬೋರ್ಡ್ ವಾಹನ) ಖರೀದಿಗಾಗಿ ಘಟಕ ವೆಚ್ಚದಲ್ಲಿ 75% ರಷ್ಟು ಸಹಾಯಧನ(4 ಲಕ್ಷ) ನೀಡಲಾಗುವುದು.

**ಮೈಕ್ರೋ ಕ್ರೆಡಿಟ್ ಪ್ರೇರಣಾ ಯೋಜನೆ:** ಮಹಿಳೆಯರಲ್ಲಿ ಗುಂಪು ಚಟುವಟಿಕೆಳಿಗೆ ಉತ್ತೇಜನ ನೀಡಲು ನೋಂದಾಯಿತ ಮಹಿಳಾ ಸ್ವ–ಸಹಾಯ ಸಂಘಗಳಿಗೆ ಆದಾಯಗಳಿಸಲು ಅನುವಾಗುವಂತೆ ಕನಿಷ್ಠ 10 ಸದ್ಯಸರಿರುವ ಮಹಿಳಾ ಸ್ವ–ಸಹಾಯ ಸಂಘಗಳಿಗೆ ಗರಿಷ್ಠ ರೂ 2.50 ಲಕ್ಷಗಳನ್ನು ಮಂಜೂರು ಮಾಡಲಾಗುವುದು ಇದರಲ್ಲಿ ರೂ.1.50 ಲಕ್ಷ ಸಹಾಯ ಧನ ಮತ್ತು ರೂ 1ಲಕ್ಷ ಸಾಲ ನೀಡಲಾಗುವುದು.


### ಹೊಸ ನ್ಯಾಯಬೆಲೆ ಅಂಗಡಿಗೆ ಅರ್ಜಿ

» **ಚಿತ್ರದುರ್ಗ**

ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ಪರುಶುರಾಂಪುರ ಹೋಬಳಿ ಜಾಜೂರು ಎಸ್.ಸಿ. ಕಾಲೋನಿ ಗ್ರಾಮಕ್ಕೆ ಹೊಸದಾಗಿ ನ್ಯಾಯಬೆಲೆ ಅಂಗಡಿ ತೆರಯುವುದಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಡಿಸೆಂಬರ್ 1 ರಂದು ಅರ್ಜಿ ಸಲ್ಲಿಸಲು ಕೊನೆಯ ದಿನ.ಹೊಸದಾಗಿ ನ್ಯಾಯಬೆಲೆ ಅಂಗಡಿ ಮಂಜೂರು ಮಾಡಲಿರುವ ಜಾಜೂರು ಎಸ್.ಸಿ.ಕಾಲೋನಿಯಲ್ಲಿ 5 ಎಎವೈ, 145 ಪಿಹೆಚ್‌ಹೆಚ್ ಸೇರಿದಂತೆ ಒಟ್ಟು 150 ಪಡಿತರ ಚೀಟಿಗಳಿವೆ. ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ಧೃಡೀಕೃತ ದಾಖಲೆಗಳೊಂದಿಗೆ ಪ್ರಕಟಣೆ ಹೊರಡಿಸಿದ ದಿನಾಂಕದಿಂದ 30 ದಿನದೊಳಗೆ, ಜಂಟಿ ನಿರ್ದೇಶಕರು, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ, ಚಿತ್ರದುರ್ಗ ಇವರಿಗೆ ಸಲ್ಲಿಸಲು ತಿಳಿಸಿದೆ. ನಿಗಧಿತ ಅವಧಿಯ ನಂತರ ಸಲ್ಲಿಕೆಯಾಗುವ ಅಥವಾ ಬೇರೆ ಯಾವುದೇ ಕಚೇರಿಯಲ್ಲಿ ಸಲ್ಲಿಕೆಯಾಗುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ನಿಗಧಿತ ಫಾರಂ “ಎ” ಅನ್ನು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಜಂಟಿ ನಿರ್ದೇಶಕರ ಕಚೇರಿ ಅಥವಾ ಚಳ್ಳಕೆರೆ ತಾಲ್ಲೂಕು ಕಚೇರಿಯಲ್ಲಿ ಪಡೆಯಬಹುದಾಗಿದೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

# ಪಿಎಂ ಸ್ವನಿಧಿ ಯೋಜನೆ ಲಾಭ ಪಡೆಯಿರಿ

» **ಚಿತ್ರದುರ್ಗ**





ಕೇಂದ್ರ ಸರ್ಕಾರ ಬಡವರಿಗಾಗಿ ನೀಡಿರುವ ವಿವಿಧ ರೀತಿಯ ಯೋಜನೆಗಳ ಫಲವನ್ನು ಪಡೆಯುವುದರ ಮೂಲಕ ನಿಮ್ಮ ಆರ್ಥಿಕ ಅಭೀವೃದ್ದಿಯನ್ನು ಮಾಡಿಕೊಳ್ಳುವಂತೆ ಮಾಜಿ ಸಚಿವರಾದ ರಾಮದಾಸ್ ಮನವಿ ಮಾಡಿದ್ದಾರೆ.

ಚಿತ್ರದುರ್ಗ ನಗರದ ಜಗಲೂರು ಮಹಾಲಿಂಗಪ್ಪ ಕನ್ವೆನ್ಷನ್ ಹಾಲ್‌ನಲ್ಲಿ ಬಿಜೆಪಿವತಿಯಿಂದ ಹಮ್ಮಿಕೊಂಡಿದ್ದ ಪ್ರದಾನ ಮಂತ್ರಿ ವಿಶ್ವಕರ್ಮ ಯೋಜನೆ ಮತ್ತೆ ಪಿಎಂ ಸ್ವನಿಧಿ ಯೋಜನೆಯ ಕುರಿತು ಮಾತನಾಡಿದ ಅವರು, ಬೇರೆ ಸರ್ಕಾರಗಳು ಯೋಜನೆಯನ್ನು ಜಾರಿ ಮಾಡುತ್ತಿದ್ದವು ಆದರೆ ಅನುಷ್ಠಾನವಾಗುತ್ತಿರಲಿಲ್ಲ, ಆದರೆ ನಮ್ಮ ಪ್ರಧಾನಮಂತ್ರಿ ಮೋದಿಯವರು ಯೋಚನೆಯನ್ನು ಮಾಡುವುದರ ಮೂಲಕ ಎಲ್ಲರಿಗೂ ಸಹಾ ಒಳ್ಳೆದಾಗುವ ರೀತಿಯಲ್ಲಿ ಯೋಜನೆಯನ್ನು ಜಾರಿ ಮಾಡುತ್ತಿದ್ದಾರೆ. ಇದರ ಲಾಭವನ್ನು ಪಡೆಯಬೇಕಿದೆ ಎಂದರು.

ಪಿಎಂ ಸ್ವನಿಧಿ ಯೋಜನೆಯು ಸಣ್ಣ ಪ್ರಮಾಣದ ವ್ಯಾಪಾರಸ್ಥರಿಗಾಗಿಯೇ ಆರಂಭ ಮಾಡಲಾಗಿದೆ ಇದರಲ್ಲಿ ರಸ್ತೆ ಬದಿಯಲ್ಲಿ ವ್ಯಾಪಾರವನ್ನು ಮಾಡುವವರಿಗಾಗಿ ಇದನ್ನು ಜಾರಿ ಮಾಡಲಾಗಿದೆ ಪ್ರಾರಂಭದಲ್ಲಿ ಅರ್ಜಿಯನ್ನು ಹಾಕುವುದರ ಮೂಲಕ ಸದಸ್ಯರಾಗಿ 10 ಸಾವಿರ ರೂಗಳನ್ನು ಯಾವುದೇ ಗ್ಯಾರೆಂಟಿ ಇಲ್ಲದ ಪಡೆಯಬಹುದಾಗಿದೆ ಇದನ್ನು ತೀರಿಸಿದ ನಂತರ ಮತ್ತಷ್ಟು ಹೆಚ್ಚಿನ ಹಣವನ್ನು ನೀಡಲಾಗುತ್ತದೆ 50 ಸಾವಿರಕ್ಕೆ ಕೇಂದ್ರ ಸರ್ಕಾರದ ಮುದ್ರಾ ಯೋಜನೆಯಡಿ ಸಾಲವನ್ನು ಗ್ಯಾರೆಂಟಿ ಇಲ್ಲದೆ ಪಡೆಯಬಹುದಾಗಿದೆ ಎಂದ ಅವರು, ಈ ಯೋಜನೆಯನ್ನು ಕರ್ನಾಟಕದಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲು ಪ್ರಧಾನ ಮಂತ್ರಿಗಳು ನನ್ನನ್ನು ಸಂಚಾಲಕರನ್ನಾಗಿ ಮಾಡಿದ್ದಾರೆ. ಈ ಹಿನ್ನಲೆಯಲ್ಲಿ ರಾಜ್ಯದಲ್ಲಿ ಪ್ರವಾಸ ಮಾಡುವುದರ ಮೂಲಕ ಯೋಜನೆಯ ಅನುಷ್ಠಾನಕ್ಕೆ ಪ್ರಯತ್ನ ಮಾಡುತ್ತಿದ್ದು ಇದರ ಬಗ್ಗೆ ಮಾಹಿತಿಯನ್ನು ಸಹಾ ನೀಡಲಾಗುತ್ತಿದೆ ಎಂದರು.

ಪಿಎಂ ಸ್ವನಿಧಿ ಯೋಜನೆಯಲ್ಲಿ ಪತ್ರಿಕೆಯನ್ನು ಹಾಕುವವರು, ಮನೆಗಳಿಗೆ ಹಾಲನ್ನು ಹಾಕುವವರು, ಅಡುಗೆ ಮಾಡುವವರು ಬಡಿಸುವವರು, ಇಸ್ತ್ರಿಯನ್ನು ಮಾಡುವವರು, ಬಟ್ಟೆಯನ್ನು ಒಗೆಯುವವರು ಚಂದಿಯನ್ನು ಆಯುವವರುಸೇರಿದಂತೆಇತರೆಹಲವಾರು ಜನರನ್ನು ಈ ಯೋಜನೆಯಡಿಯಲ್ಲಿ ಸೇರಿಸಲಾಗಿದೆ. ಈ ರೀತಿಯ ಯೋಜನೆ ಜಾರಿ ಮಾಡಿರುವುದು ದೇಶದಲ್ಲಿಯೇ ಪ್ರಥಮವಾಗಿದೆ. ಕೇಂದ್ರ ಸರ್ಕಾರ ನೀಡುವ 10 ಸಾವಿರಕ್ಕೆ ಶೇ.7 ರಷ್ಟು ಬಡ್ಡಿಯನ್ನು ಕೇಂದ್ರ ಸರ್ಕಾರವೇ ನೀಡಲಿದೆ. ಉಳಿದ ಬಡ್ಡಿಯನ್ನು ಫಲಾನುಭವಿಗಳು ನೀಡಬೇಕಿದೆ. ಇದರೊಂದಿಗೆ ತಲಾ 2 ಲಕ್ಷದವರೆಗೆ ಜೀವನ ವಿಮಾ, ಜೀವನ ರಕ್ಷಾ ಮಾತೃ ವಂದನಾ ಈ ಯೋಜನೆಯ ಮಹಿಳಾ ಫಲಾನುಭವಿಗಳು ಗರ್ಭಿಣಿಯಾದರೆ 5000 ರೂ.ಗಳನ್ನು ನೀಡುವುದ್ದಲ್ಲದೆ ಮಗುವಿನ ಸುರಕ್ಷೆಗಾಗಿ ಯೋಜನೆಯೂ ಸಿಗಲಿದೆ. 60 ವರ್ಷ ಆದವರಿಗೆ ತಲಾ 3000 ರೂ ಪೆನ್‌ಷನ್ ಸಿಗಲಿದೆ. ಈ ಯೋಜನೆಯಡಿ ಸ್ಥಳೀಯ ಸಂಸ್ಥೆಗಳಿಂದ ಅರ್ಹತಾ ಪತ್ರವನ್ನು ಪಡೆದವರಿಗೆ ಬ್ಯಾಂಕ್‌ಗಳು ಸಾಲವನ್ನು ನೀಡಲು ನಿರಾಕರಿಸುವಂತಿಲ್ಲ ಎಂದು ರಾಮದಾಸ್ ತಿಳಿಸಿದರು.

ಪ್ರಧಾನ ಮಂತ್ರಿಗಳು ಡಿಜಿಟಲ್ ಇಂಡಿಯಾವನ್ನು ಪ್ರೇರೇಪಿಸುತ್ತಿದ್ದಾರೆ ನಮ್ಮೆಲ್ಲಾ ಹಣದ ವ್ಯವಹಾರವನ್ನು ಮೊಬೈಲ್ ಮೂಲಕವೇ ಮಾಡುವುದಕ್ಕೆ ತಿಳಿಸಿದ್ದಾರೆ ಇದಕ್ಕೆ ಪ್ರೋತ್ಸಾಹವಾಗಿ ವ್ಯವಹಾರ ಮಾಡಿದವರಿಗೆ 100 ರೂ ನೀಡುತ್ತಿದ್ದಾರೆ. ಕೇಂದ್ರ ಸರ್ಕಾರ ತನ್ನ ಎಲ್ಲಾ ಯೋಜನೆಗಳಿಗೆ ರಾಜ್ಯ ಸರ್ಕಾರಗಳಿಗೆ ಹಣವನ್ನು ನೀಡಿದೆ ಅಲ್ಲಿಂದ ಫಲಾನುಭವಿಗಳಿಗೆಹಣವನ್ನುನೀಡಬೇಕಿದೆ ಆದರೆ ಇಲ್ಲ ಸರ್ವರ್ ಸಮಸ್ಯೆ ಎದುರಾಗಿದೆ ಕೇಂದ್ರದಿಂದ ರಾಜ್ಯ ಸರ್ಕಾರಗಳಿಗೆ ಹಣ ಬರುವಾಗ ಇರದ ಸರ್ವರ್ ಸಮಸ್ಯೆ ರಾಜ್ಯದ ಫಲಾನುಭವಿಗಳಿಗೆ ಹಣವನ್ನು ಹಾಕುವಾಗ ಸರ್ವರ ಸಮಸ್ಯೆ ಬರುತ್ತದೆ ಎಂದರೆ ನೀವೇ ಅರ್ಥ ಮಾಡಿಕೊಳ್ಳಿ ಪ್ರಧಾನ ಮಂತ್ರಿಗಳ ಈ ಯೋಜನೆಯನ್ನು ಅನುಷ್ಠಾನ ಮಾಡಲು ಇಷ್ಟ ಇಲ್ಲ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮಾಜಿ ಶಾಸಕರಾದ ಜಿ.ಎಚ್. ತಿಪ್ಪಾರೆಡ್ಡಿಯವರು, ನರೇಂದ್ರ ಮೋದಿಯವರು ದೇಶದ ಪ್ರಧಾನ ಮಂತ್ರಿಗಳಾದ ಮೇಲೆ ದೇಶದ ಪ್ರಗತಿ ಹೆಚ್ಚಾಗಿದೆ. ವಿವಿಧ ರೀತಿಯ ಯೋಜನೆಗಳನ್ನು ಜಾರಿ ಮಾಡುವುದರ ಮೂಲಕ ದೇಶದ ಜನತೆಗೆ ಸಹಾಯವನ್ನು ಮಾಡಿದ್ದಾರೆ. ಒಂದು ಕಾಲದಲ್ಲಿ ನಮ್ಮ ದೇಶವನ್ನು ಕೀಳಾಗಿ ಕಾಣುತ್ತಿದ್ದವರು ಇಂದು ನಮ್ಮ ಸಹಾಯವನ್ನು ಬೇಡುತ್ತಿದ್ದಾರೆ. ಇದಕ್ಕೆ ಇಸ್ರೇಲ್ ಯುದ ಉದಾಹರಣೆಯಾಗಿದೆ. ಇದುವರೆವಿಗೂ ದೇಶವನ್ನಾಳಿದ ಯಾವ ಪಕ್ಷಗಳು ಸರ್ಕಾರಗಳು ಸಹಾ ಇಂತಹ ಹಲವಾರು ಯೋಜನೆಯನ್ನು ನೀಡಿಲ್ಲ ಮೋದಿಯವರು ದೇಶದ ಎಲ್ಲರ ಬಗ್ಗೆಯೂ ಸಹಾ ಯೋಚನೆಯನ್ನು ಮಾಡುವುದರ ಮೂಲಕ ಅವರಿಗೆ ನೆರವಾಗಿದ್ದಾರೆ ಎಂದರು.

ಕಳೆದ9ವರೆವರ್ಷದಲ್ಲಿಮೋದಿಯವರು ವಿವಿಧ ರೀತಿಯ ಕಾರ್ಯಕ್ರಮಗಳನ್ನು ನೀಡಿದ್ದಾರೆ ಹಲವಾರು ಜನತೆ ಇದರ ಲಾಭವನ್ನು ಪಡೆದಿದ್ದಾರೆ ಮತ್ತೇ ಕೆಲವರಿಗೆ ಇದನ್ನು ಪಡೆಯುವ ರೀತಿ ಗೋತ್ತಿಲ್ಲದೆ ಸುಮ್ಮನಿದ್ದಾರೆ. ದೇಸದ ಪ್ರತಿಯೊಬ್ಬರಿಗೂ ಸಹಾ ಮೋದಿಯವರು ಬ್ಯಾಂಕ್ ಖಾತೆಗಳನ್ನು ತೆಗೆಸುವುದರ ಮೂಲಕ ಉಳಿತಾಯದ ಮನೋಭಾವವನ್ನು ಮೂಡಿಸಿದ್ದಾರೆ. ಕೇಂದ್ರ ಸರ್ಕಾರ ಫಲಾನುಭವಿಗೆ ನೀಡಿ ಹಣ ಪೂರ್ಣ ಪ್ರಮಾಣದಲ್ಲಿ ಫಲಾನುಭವಿಗೆ ತಲುಪುತ್ತದೆ ಬೇರೆ ಸರ್ಕಾರಗಳಲ್ಲಿ ಕಡಿಮೆ ಪ್ರಮಾಣದಲ್ಲಿ ಫಲಾನುಭವಿಗೆ ಹಣ ತಲುಪುತ್ತಿತ್ತು. ಪ್ರಪಂಚದಲ್ಲಿ ಬೇರೆ ದೇಶಗಳು ನಮ್ಮ ದೇಶವನ್ನು ನೋಡುವಂತೆ ಮಾಡಿದ್ದಾರೆ ಎಂದು ತಿಪ್ಪಾರೆಡ್ಡಿ ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಿಜೆಪಿ ಜಿಲ್ಲಾಧ್ಯಕ್ಷರಾದ ಎ.ಮುರಳಿ ವಹಿಸಿದ್ದರು. ಮಾಜಿ ಶಾಸಕ ನೆ.ಲಾ.ನರೇಂದ್ರಬಾಬು, ಬಿಜೆಪಿ ಮುಖಂಡರಾದ ರಘುಚಂದನ್, ಮಾಧುರಿ ಗೀರಿಶ್, ರಾಮದಾಸ್, ಲಕ್ಷ್ಮೀಕಾಂತ್, ಪ್ರಧಾನ ಕಾರ್ಯದರ್ಶಿ ನರೇಂದ್ರ, ಶಿವಣ್ಣಚಾರ್, ನಾಗರಾಜ್ ಬೇದ್ರೇ, ಸಂಪತ್ ಕುಮಾರ್, ಕಲಂ ಸೀತಾರಾಮರೆಡ್ಡಿ ಭಾಗವಹಿಸಿದ್ದರು.

# ಸ್ವಯಂ ಉದ್ಯಮ ಸ್ಥಾಪಿಸಿ: ದಾವಣಗೆರೆ ಸಿಡಾಕ್ ಜಂಟಿ ನಿರ್ದೇಶಕ ಆರ್.ಪಿ.ಪಾಟೀಲ್ ಸಲಹೆ

» **ಚಿತ್ರದುರ್ಗ**



ಉದ್ಯಮಶೀಲತಾಭಿವೃದ್ಧಿ ಕಾರ್ಯಕ್ರಮದ ಉದ್ದೇಶ ಅರಿತು ಶಿಬಿರಾರ್ಥಿಗಳು ಸ್ವಯಂ ಉದ್ಯಮವನ್ನು ಸ್ಥಾಪಿಸಿದಾಗ ತರಬೇತಿಯ ಸಂಪೂರ್ಣವಾಗಿ ಯಶಸ್ವಿಗೊಂಡಂತೆ ಎಂದು ದಾವಣಗೆರೆ ಸಿಡಾಕ್ ಜಂಟಿ ನಿರ್ದೇಶಕ ಆರ್.ಪಿ.ಪಾಟೀಲ್ ಹೇಳಿದರು.

ಇಲ್ಲಿನ ಜಿಲ್ಲಾ ಕೈಗಾರಿಕಾ ಕೇಂದ್ರದಲ್ಲಿ ಈಚೆಗೆ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್) ಸಂಸ್ಥೆಯಿಂದ ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ವರ್ಗದ ಮಹಿಳೆಯರಿಗೆ “ಹತ್ತು ದಿನಗಳ ಉದ್ಯಮಶೀಲತಾಭಿವೃದ್ಧಿ ಕಾರ್ಯಕ್ರಮ”ದ ಸಮಾ ರೋಪ ಸಮಾರಂಭದಲ್ಲಿ ಅವರು ಮಾತನಾಡಿದರು. "10 ದಿನಗಳ ಅವಧಿಯಉದ್ಯಮಶೀಲತಾಭಿವೃದ್ಧಿ ತರಬೇತಿ ಪೂರ್ಣಗೊಳಿಸಿದ ಅಭ್ಯರ್ಥಿಗಳನ್ನು ಅಭಿನಂದಿಸಿ ಶುಭ ಹಾರೈಸಿದರು.

ಸೂರು ಕೆಫೆ ಮಾಲೀಕರಾದ ಟಿ.ತನುಜಾ ಮಾತನಾಡಿ, ಪರಿಶಿಷ್ಟ ವರ್ಗದ ಮಹಿಳೆಯರು ಸ್ವಯಂ ಉದ್ಯಮೆದಾರರಾಗ ಬೇಕೆಂಬ ಉತ್ಸಾಹದಿಂದ ತರಬೇತಿಯಲ್ಲಿ ಭಾಗವಹಿಸಿದ ಶಿಬಿರಾರ್ಥಿಗಳಿಗೆ ಶುಭ ಹಾರೈಸಿದರು. ನಂತರದಲ್ಲಿ ಉದ್ಯಮ ಪ್ರಾರಂಭಿಸಿದಾಗ ಅವರು ಎದುರಿಸಿದಂತಹ ಸಮಸ್ಯೆಗಳು ಹಾಗೂ ಅವುಗಳನ್ನು ಹೇಗೆ ಎದುರಿಸಿದರು ಉದ್ಯಮದ ಪ್ರಗತಿಯಲ್ಲಿ ಅವರ ಕುಟುಮಬ ವರ್ಗದವರ ಬೆಂಬಲ ಮತ್ತು ಸಿಡಾಕ್ ಸಂಸ್ಥೆಯ ಮಾರ್ಗದರ್ಶನೆ ಅತ್ಯಂತ ಮಹತ್ತವಾದದ್ದು ಆದ್ದರಿಂದ ಕೇವಲ ತರಬೇತಿ ಪಡೆದು ಕುರುವುದಲ್ಲದೆ ತರಬೇತಿಯ ನಂತರ ಪ್ರತಿಯೊಬ್ಬರೂ ಸಹ ಉದ್ಯಮ ಪ್ರಾರಂಭಿಸಿ ಕುಟುಂಬ ಮತ್ತು ದೇಶದ ಆರ್ಥಿಕತೆಗೆ ಸಹಕಾರಿಯಾಗಬಹುದು ಎಂದು ಶಿಬಿರಾರ್ಥಿಗಳನ್ನು ಪ್ರೇರೇಪಿಸಿದರು. ಯಶಸ್ವಿಯಾಗಿ ತರಬೇತಿ ಪಡೆದ ಶಿಬಿರಾರ್ಥಿಗಳು ತರಬೇತಿಯಲ್ಲಿ ತಮ್ಮ ಅನುಭವ, ತರಬೇತಿಯಿಂದ ಉದ್ಯಮದ ಬಗ್ಗೆ ಉತ್ತಮ ಮಾಹಿತಿ ದೊರೆತಿದ್ದು; ತಮ್ಮ ಉದ್ಯಮ ಪ್ರಾರಂಭಿಸಲು ತುಂಬಾ ಉಪಯೋಗವಾಗುವುದು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಈ ತರಬೇತಿಯಿಂದ ಉದ್ಯಮದ ಜೊತೆಗೆ ಉತ್ತಮ ಜೀವನ ರೂಪಿಸಿಕೊಳ್ಳಲು ಮಾರ್ಗದರ್ಶನ ದೊರೆತಿರುವುದಾಗಿ ಹರ್ಷ ವ್ಯಕ್ತಪಡಿಸಿದರು.

## ಎಸ್‌ಜೆಎಂ ಡಿಪ್ಲೋಮೊ ಕಾಲೇಜಿನ ವಿದ್ಯಾರ್ಥಿಗಳಿಗೆ ಸ್ವಾಗತ ಕಾರ್ಯಕ್ರಮ



» **ಚಳ್ಳಕೆರೆ**

ನಗರದ ಎಸ್‌ಜೆಎಂ ಡಿಪ್ಲೋಮೊ ಕಾಲೇಜಿನ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ದ್ವಿತೀಯ ವರ್ಷದ ವಿದ್ಯಾರ್ಥಿಗಳು ಸ್ವಾಗತಕೋರುವ ಕಾರ್ಯಕ್ರಮವನ್ನು ಸಹ್ಯಾದ್ರಿ ಕಾಲೇಜಿನ ಸಮಾಜವಿಜ್ಞಾನ ಶಿಕ್ಷಕ ಎನ್. ಮಲ್ಲಿಕಾರ್ಜುನ್ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಇಂದು ವಿದ್ಯಾರ್ಥಿಗಳಿಗೆ ಎಲ್ಲಾ ರೀತಿಯ ಸೌಲಭ್ಯವನ್ನು ಸರ್ಕಾರ ಹಾಗೂ ಖಾಸಗಿ ಕಾಲೇಜುಗಳಲ್ಲಿ ವ್ಯವಸ್ಥೆ ಮಾಡಲಾಗುತ್ತಿದೆ. ಕಳೆದ ಕೆಲವು ದಶಕಗಳ ಹಿಂದೆ ಕೇವಲ ನಗರ ಪ್ರದೇಶದ ವಿದ್ಯಾರ್ಥಿಗಳಿಗೆ ಸೀಮಿತವಾಗಿದ್ದ ಶಿಕ್ಷಣ ಇಂದು ಗ್ರಾಮೀಣ ಭಾಗದ ಗಡಿಭಾಗದ ವಿದ್ಯಾರ್ಥಿಗಳಿಗೂ ಸಹ ಸುಲಭವಾಗಿ ತಲುಪುವಂತಾಗಿದೆ. ಶಿಕ್ಷಣದ ಕಲಿಕೆಯ ಬಗ್ಗೆ ವಿದ್ಯಾರ್ಥಿಗಳಲ್ಲಿ ಆಸಕ್ತಿ ಮೂಡಿದಾಗ ಮಾತ್ರ ಶಿಕ್ಷಣದ ಮಹತ್ವ ಹೆಚ್ಚುತ್ತದೆ. ಪ್ರಸ್ತುತ ದಿನಗಳಲ್ಲಿ ತಾಂತ್ರಿಕ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ಇದ್ದು, ತಾವೆಲ್ಲರೂ ಏಕಾಗ್ರತೆಯಿಂದ ಶಿಕ್ಷಣವನ್ನು ಕಲಿತು ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕೆಂದು ತಿಳಿಸಿದರು.

**ಪ್ರಮುಖ ಸುದ್ದಿ**

# ಶಿಕ್ಷಣದ ಜತೆಗೆ ಪಠ್ಯೇತರ ಚಟುವಟಿಕೆಗೂ ನೀಡಿ ಆದ್ಯತೆ

» **ಚಿತ್ರದುರ್ಗ**



ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಪಠ್ಯೇತರ ಚಟುವಟಿಕೆಗಳಿಗೂ ಆದ್ಯತೆ ನೀಡಬೇಕು ಎಂದು ಸರಸ್ವತಿ ಕಾನೂನು ಕಾಲೇಜಿನ ಪ್ರಾಂಶುಪಾಲೆ ಡಾ.ಎಂ.ಎಸ್.ಸುಧಾದೇವಿ ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಶುಕ್ರವಾರ ದಾವಣಗೆರೆ ವಿಶ್ವವಿದ್ಯಾಲಯ, ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಐ.ಕ್ಯೂ.ಎ.ಸಿ ಸಹಯೋಗದಲ್ಲಿ 2023–24ನೇ ಸಾಲಿನ ಪಠ್ಯೇತರ ಕಾರ್ಯಚಟುವಟಿಕೆಗಳ ಉದ್ಘಾಟನಾ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಕರು ಉಪನ್ಯಾಸ ನೀಡುವುದರ ಜೊತೆಗೆ ಹೆಣ್ಣುಮಕ್ಕಳು ಯಾವ ರೀತಿಯಾಗಿ ಸಮಾಜದಲ್ಲಿ ಬದುಕಬೇಕು ಎಂಬ ನೀತಿ ಪಾಠ ಹೇಳಬೇಕು. ವಿದ್ಯಾರ್ಥಿಗಳು ಸರ್ಕಾರದ ವಿವಿಧ ಸೌಲಭ್ಯ ಸದುಪಯೋಗ ಪಡೆದುಕೊಳ್ಳಬೇಕು. ಉತ್ತಮವಾದ ವಿದ್ಯಾರ್ಥಿಯಾಗಿ ಗುರುತಿಸಿಕೊಂಡು ಕಾಲೇಜಿಗೆ ಹಾಗೂ ತಂದೆ–ತಾಯಿಗಳಿಗೆ ಕೀರ್ತಿ ತರಬೇಕು ಎಂದರು.ಸಮಾಜವನ್ನು ಬದಲಾವಣೆ ಮಾಡಬೇಕು ಅಂದರೆ ಅದು ಶಿಕ್ಷಣದಿಂದ ಮಾತ್ರ ಸಾಧ್ಯ. ವಿವಿಧ ಕ್ಷೇತ್ರಗಳಲ್ಲಿ ಹೆಣ್ಣು ಮಕ್ಕಳು ಹೆಚ್ಚು ಸಾಧನೆ ಮಾಡಿದ್ದಾರೆ.ಅದೇ ರೀತಿಯಲ್ಲಿ ನೀವು ಮುಂದುವರೆಯುವಂತೆ ಸಲಹೆ ನೀಡಿದರು.

ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಾಂಶುಪಾಲ ಡಾ.ಹೆಚ್. ಗುಡ್ಡದೇಶ್ವರಪ್ಪ ಮಾತನಾಡಿ, ಶಿಕ್ಷಣ ಹಾಗೂ ಜ್ಞಾನ ಪ್ರಪಂಚವನ್ನು ಆಳುತ್ತದೆ. ಬಡತನ, ಮೂಢನಂಬಿಕೆ, ಅಸಮಾನತೆಯಿಂದ ಹೊರಬರಲು ಶಿಕ್ಷಣ ಪ್ರಮುಖ ಪಾತ್ರ ವಹಿಸುತ್ತದೆ. ಈ ಹಿನ್ನಲೆಯಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿಯು ಉತ್ತಮವಾದ ಶಿಕ್ಷಣ ಪಡೆದುಕೊಳ್ಳಬೇಕು ಹಾಗೂ ಉನ್ನತ ಸ್ಥಾನ ಅಲಂಕರಿಸಬೇಕು ಎಂದರು. ರಾಜ್ಯ ಸರ್ಕಾರದಿಂದ ಮಹಿಳೆಯರಿಗೆ ಉಚಿತ ಶಿಕ್ಷಣ, ಉತ್ತಮ ಹಾಸ್ಟೆಲ್ ಸೌಲಭ್ಯ, ವಿದ್ಯಾರ್ಥಿ ವೇತನ ನೀಡಲಾಗುವುದು ಇದರ ಉಪಯೋಗ ಬಳಸಿಕೊಳ್ಳಬೇಕು. ನಿರಂತರ ಪಾಠ ಪ್ರವಾಚನದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಿ ವಿದ್ಯಾರ್ಥಿಗಳು ತಮ್ಮ ಪ್ರತಿಭೆ ಹೊರಹಾಕಬೇಕು. ದುಶ್ಚಟ ಹಾಗೂ ಮೊಬೈಲ್‌ನಿಂದ ದೂರ ಉಳಿದರೆ ಸದೃಢವಾದ ರಾಷ್ಟ್ರ ಕಟ್ಟುವುದರ ಜೊತೆಗೆ ಜೀವನ ರೂಪಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಹೇಳಿದರು. ಸಾಂಸ್ಕೃತಿಕ ಸಮಿತಿ ಸಂಚಾಲಕಡಾ.ಡಿ.ಓ.ಸಿದ್ದಪ್ಪಪ್ರಾಸ್ತವಿಕವಾಗಿ ಮಾತನಾಡಿ, ಕರ್ನಾಟಕದಲ್ಲಿ ಹೆಚ್ಚು ವಿದ್ಯಾರ್ಥಿಗಳನ್ನು ಹೊಂದಿರುವ ಕಾಲೇಜು ಅಂದರೆ ಅದು ಚಿತ್ರದುರ್ಗ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಎಂಬ ಹೆಗ್ಗಳಿಕೆ ಪಡೆದಿದೆ ಎಂದರು.

ಕಾಲೇಜಿನಲ್ಲಿ ಈ ವರ್ಷ ಪಠ್ಯೇತರ ಚಟುವಟಿಕೆಗಳನ್ನು ಆಯೋಜಿಸಲಾಗಿದೆ. ಎಲ್ಲಾ ವಿದ್ಯಾರ್ಥಿಗಳು ಚಟುವಟಿಕೆಗಳಲ್ಲಿ ಭಾಗವಹಿಸಿ ಸೌಲಭ್ಯ ಪಡೆದುಕೊಳ್ಳಬೇಕು ಇದರ ಜೊತೆಗೆ ಈ ಬಾರಿ ವಾರ್ಷಿಕ ಶಿಬಿರ ಹಮ್ಮಿಕೊಳ್ಳಲಾಗುವುದು ಹಾಗೂ ಅಂತಿಮ ವಿದ್ಯಾರ್ಥಿಗಳಿಗೆ ಉದ್ಯೋಗ ಮೇಳ ಆಯೋಜನೆ ಮಾಡಲಾಗುವುದು ಮತ್ತು ವಾರ್ಷಿಕ ಸಂಚಿಕೆಯನ್ನು ಬಿಡುಗಡೆ ಮಾಡಲಾಗುವುದು ಎಂದು ಹೇಳಿದರು.

ಪಠ್ಯೇತರ ಕಾರ್ಯ ಚಟುವಟಿಕೆಗಳ ಅಂಗವಾಗಿ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿತು. ಕಾರ್ಯಕ್ರಮದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಾಣಿಜ್ಯ ಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಸಿ.ಚನ್ನಕೇಶವ, ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥೆ ಲೀಲಾವತಿ, ಆಂಗ್ಲ ಭಾಷೆ ವಿಭಾಗದ ಮುಖ್ಯಸ್ಥ ಮಧುಸೂದನ್, ಐ.ಕ್ಯೂ.ಎ.ಸಿ ಸಂಯೋಜಕ ಹಾಗೂ ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಶಿವಣ್ಣ, ವಾಣಿಜ್ಯ ಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಗಿರೀಶ್, ಶಕುಂತಲಾ, ಗ್ರಂಥಪಾಲಕ ಕುಮಾರಸ್ವಾಮಿ, ದೈಹಿಕ ವಿಭಾಗದ ಪ್ರಾಧ್ಯಾಪಕ ಶಿವಪ್ರಸಾದ್ ಸೇರಿದಂತೆ ಕಾಲೇಜಿನ ಸಿಬ್ಬಂದಿಗಳು ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T